ವಿಜಯಪುರ | ಸಂಪುಟ 02 | ಸಂಚಿಕೆ 29 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

Udayarashmi Kannada Daily


ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com | RNI NO: KARKAN/2023/86203 | ಮಂಗಳವಾರ, ಮಾರ್ಚ್ 19, 2024



"ವಿಜಯಪುರ ಮತಕ್ಷೇತ್ರಕ್ಕೆ ಕಳೆದ 10 ವರ್ಷಗಳಲ್ಲಿ ಒಂದು ಲಕ್ಷ ಕೋಟಿ ರೂ ಅನುದಾನ ತಂದು ವಿವಿಧ ರೀತಿಯ ಅಭಿವೃದ್ಧಿ ಕಾರ್ಯ ಮಾಡಿದ್ದೇನೆ. ನಾನು ಭಾವನಾತ್ಮಕ ಸಂಬಂಧವಿಟ್ಟುಕೊಂಡು ರಾಜಕೀಯ ಮಾಡಿದ್ದೇನೆ. ಸೇಡಿನ & ಜಾತಿಯ ರಾಜಕಾರಣ ಎಂದೂ ಮಾಡಿಲ್ಲ."

– ರಮೇಶ ಜಿಗಜಿಣಗಿ
ಸಂಸದರು, ವಿಜಯಪುರ

ಕೋಲಾರ ಕ್ಷೇತ್ರ ಬಿಟ್ಟು ಕೊಡಲು ಬಿಜೆಪಿ ವರಿಷ್ಠರ ಮೀನಾಮೇಷ | ಜೆಡಿಎಸ್ ನಾಯಕರಿಂದ ಅಸಮಾಧಾನ ಸ್ಫೋಟ

# ಬಿಜೆಪಿ–ಜೆಡಿಎಸ್ ಮೈತ್ರಿಯಲ್ಲಿ ಬಿರುಕು?



ಬೆಂಗಳೂರು: ಇಪ್ಪತ್ತು ಲೋಕಸಭೆ ಕ್ಷೇತ್ರಗಳಿಗೆ ಬಿಜೆಪಿ ತನ್ನ ಅಭ್ಯರ್ಥಿಗಳನ್ನು ಘೋಷಣೆ ಮಾಡುವಾಗ ಜೆಡಿ–ಎಸ್ ನಾಯಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದಿರುವುದು ಮತ್ತು ಕೋಲಾರ ಕ್ಷೇತ್ರವನ್ನು ಜೆಡಿಎಸ್ ಪಕ್ಷಕ್ಕೆ ಬಿಟ್ಟು ಕೊಡಲು ಬಿಜೆಪಿ ವರಿಷ್ಠರು ಮೀನಾಮೇಷ ಎಣಿಸುತ್ತಿರುವ ಬಗ್ಗೆ ಜೆಡಿಎಸ್ ನಾಯಕರು ತೀವ್ರ ಅಸಮಾಧಾನ ಹೊರಹಾಕಿದ್ದಾರೆ ಎಂದು ತಿಳಿದು ಬಂದಿದೆ.

ಬೆಂಗಳೂರಿನ ಪಕ್ಷದ ರಾಜ್ಯ ಕಚೇರಿ ಜೆಪಿ ಭವನದಲ್ಲಿ ನಡೆದ ಕೋರ್ ಕಮಿಟಿ ಸದಸ್ಯರು ಹಾಗೂ ಚುನಾವಣಾ ಉಸ್ತುವಾರಿ, ಸಹ ಉಸ್ತುವಾರಿಗಳ ಸಭೆಯಲ್ಲಿ ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷ ಹೆಚ್. ಡಿ ದೇವೆಗೌಡರು ಹಾಗೂ ಪಕ್ಷದ ರಾಜ್ಯಾಧ್ಯಕ್ಷ ಹೆಚ್.ಡಿ ಕುಮಾರಸ್ವಾಮಿ ಅವರ ಸಮಕ್ಷಮದಲ್ಲಿ ನಾಯಕರು ಅತೃಪ್ತಿ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ.

ಸಭೆಯಲ್ಲಿ ಒಬ್ಬೊಬ್ಬರಾಗಿಯೇ ತಮ್ಮ ಅಭಿಪ್ರಾಯವನ್ನು ಹೇಳಿದ ಮುಖಂಡರು;ಆರಂಭದಲ್ಲಿಯೇ ನಮ್ಮನ್ನು, ನಮ್ಮ ಪಕ್ಷವನ್ನು ಬಿಜೆಪಿ ನಿರ್ಲಕ್ಷ್ಯ ಮಾಡುತ್ತಿದೆ. ಚುನಾವಣಾ ಸಭೆ, ಪ್ರಚಾರವನ್ನು ನಮ್ಮನ್ನು ಬಿಟ್ಟು ಮಾಡುತ್ತಿದೆ. ಯಾವ ಸಭೆಗೂ ನಮ್ಮನ್ನು ಬಿಜೆಪಿಯವರು ಕರೆಯುತ್ತಿಲ್ಲ. ಇಪ್ಪತ್ತು ಕ್ಷೇತ್ರಗಳ ಅಭ್ಯರ್ಥಿಗಳನ್ನು ಆಯ್ಕೆ ಮಾಡಿದ ಬಿಜೆಪಿ, ಈ ಬಗ್ಗೆ ಜೆಡಿಎಸ್ ವರಿಷ್ಠರನ್ನು ವಿಶ್ವಾಸಕ್ಕೆ ತೆಗೆದುಕೊಂಡಿಲ್ಲ ಎಂದು ತಮ್ಮ ಬೇಸರವನ್ನು ತೋಡಿಕೊಂಡಿದ್ದಾರೆ ಎಂಬ ಮಾಹಿತಿ ದೊರೆತಿದೆ.

**ಆರಂಭದಲ್ಲಿಯೇ ಹೀಗಾದರೆ ಮುಂದೇನು?**

ಆರಂಭದಲ್ಲಿಯೇ ಹೀಗಾದರೆ ಮುಂದೇನು? ಇದು ಪಕ್ಷಕ್ಕೆ ಮಾರಕ. ರಾಜ್ಯದ 18 ಲೋಕಸಭೆ ಕ್ಷೇತ್ರಗಳಲ್ಲಿ ಬಿಜೆಪಿ ಅಭ್ಯರ್ಥಿಗಳನ್ನು ಗೆಲ್ಲಿಸುವ ಶಕ್ತಿ ಜೆಡಿಎಸ್ ಪಕ್ಷಕ್ಕೆ ಇದೆ. ಶೇ.3 ರಿಂದ 4ರಷ್ಟು ಜೆಡಿಎಸ್ ಮತಗಳು ಮೈತ್ರಿ ಅಭ್ಯರ್ಥಿಗೆ ಬಂದರೆ 28 ಕ್ಷೇತ್ರಗಳ ಪೈಕಿ 18 ಕ್ಷೇತ್ರಗಳಲ್ಲಿ ಬಿಜೆಪಿ ನಿರಾಯಾಸವಾಗಿ ಗೆಲ್ಲುತ್ತದೆ ಎಂದು ಅಂಕಿ ಅಂಶ ಇಟ್ಟುಕೊಂಡು ವರಿಷ್ಠರ ಮೇಲೆ ಮುಖಂಡರು ಒತ್ತಡ ಹೇರಿದ್ದಾರೆ.

ರಾಜ್ಯಕ್ಕೆ ಪ್ರಧಾನಿ ಬರುತ್ತಿದ್ದಾರೆ. ಭಾಷಣ ಮಾಡಿಕೊಂಡು ಹೋಗುತ್ತಿದ್ದಾರೆ. ನಮ್ಮ ಪಕ್ಷವನ್ನು ಸ್ಥಳೀಯ ಬಿಜೆಪಿ ವಿಶ್ವಾಸಕ್ಕೆ ತೆಗೆದುಕೊಳ್ಳುತ್ತಿಲ್ಲ. ಪ್ರಧಾನಿಗಳ ಸಭೆಗಳಿಗೆ ದೇವೇಗೌಡರು ಹಾಗೂ ಕುಮಾರಸ್ವಾಮಿ ಅವರನ್ನು ಕರೆಯಬೇಕಲ್ಲವೇ? ಕಲಬುರಗಿ ಸಭೆಗೂ ಜೆಡಿಎಸ್ ಸ್ಥಳೀಯ ಮುಖಂಡರನ್ನು ಕರೆದಿಲ್ಲ, ಅವರೇ ಮಾಡಿಕೊಂಡಿದ್ದಾರೆ. ಹೈದರಾಬಾದ್ ಕರ್ನಾಟಕ ಭಾಗದ ಜೆಡಿ–ಎಸ್ ಶಾಸಕರು, ಮಾಜಿ ಶಾಸಕರಿಗೆ ಮಾಹಿತಿ ಕೊಟ್ಟಿಲ್ಲ. ಶಿವಮೊಗ್ಗ ಸಭೆಗೂ ದೇವೇಗೌಡರು, ಕುಮಾರಸ್ವಾಮಿ ಅವರನ್ನು ಕರೆಯಬಹುದಿತ್ತು. ಶಿವಮೊಗ್ಗ ಸಭೆಗೂ ನಮ್ಮ ನಾಯಕರನ್ನು ಕರೆದಿಲ್ಲ ಎಂದು ಮುಖಂಡರು ಸಿಟ್ಟು ತೋಡಿಕೊಂಡಿದ್ದಾರೆ.

ಎರಡು ಸೀಟಿಗಾಗಿ ಬಿಜೆಪಿ ಜೊತೆ ಮೈತ್ರಿ ಮಾಡಿಕೊಳ್ಳಬೇಕಿತ್ತಾ?

ನಮ್ಮ ಪಕ್ಷವನ್ನು ಒತ್ತೆ ಇಟ್ಟು ಮೈತ್ರಿ ಮಾಡಿಕೊಳ್ಳುವ ಅಗತ್ಯವಿಲ್ಲ. ನಮಗೆ ಮೋದಿಯವರ ಬಗ್ಗೆ ಅಪಾರ ಗೌರವ ಇದೆ. ಆ ಬಗ್ಗೆ ಎರಡನೇ ಮಾತೇ ಇಲ್ಲ. ಬಿಜೆಪಿಯಿಂದ ಇಂಥ ನಡವಳಿಕೆ ನಿರೀಕ್ಷೆ ಮಾಡಿರಲಿಲ್ಲ. ಕೋಲಾರ ಕ್ಷೇತ್ರ ಬಿಟ್ಟುಕೊಡುವ ಬಗ್ಗೆ ಬಿಜೆಪಿ ಮೀನಾಮೇಷ ಎಣಿಸುತ್ತಿದೆ. ಕೇವಲ ಎರಡು ಸೀಟಿಗಾಗಿ ನಾವು ಬಿಜೆಪಿ ಜೊತೆ ಮೈತ್ರಿ ಮಾಡಿಕೊಳ್ಳಬೇಕಿತ್ತಾ? ಇವತ್ತೇ ಕೋಲಾರ ಅಭ್ಯರ್ಥಿಯನ್ನು ಘೋಷಣೆ ಮಾಡಿ. ಇಂಥ ಅನಿಶ್ಚಿತತೆಯಿಂದ ಪಕ್ಷಕ್ಕೆ ನಷ್ಟ ಆಗುತ್ತದೆ ಎಂದು ಮುಖಂಡರು ತಮ್ಮ ಕಳವಳ ವ್ಯಕ್ತಪಡಿಸಿದ್ದಾರೆ.

ಕೋಲಾರ ಜೆಡಿಎಸ್ ಪಾಲಿನ ಕ್ಷೇತ್ರ ಎಂದು ಮೊದಲಿನಿಂದ ಹೇಳಿದ್ದೀರಿ ನೀವು. ಕೋಲಾರ, ಹಾಸನ, ಮಂಡ್ಯ ಸೇರಿದಂತೆ 5 ಕ್ಷೇತ್ರಗಳು ಜೆಡಿಎಸ್‌ಗೆ ಬರುತ್ತವೆ ಎಂದು ನೀವು ಹೇಳಿದ್ದಿರಿ. ಆದರೆ, ಈಗ ನೋಡಿದರೆ ಬಿಜೆಪಿ ಎರಡು ಸೀಟಿಗೆ ಬಂದು ನಿಂತಿದೆ ಎಂದು ಕುಮಾರಸ್ವಾಮಿ ಅವರನ್ನು ನಾಯಕರು ಪ್ರಶ್ನಿಸಿದ್ದಾರೆ ಎಂದು ಹೇಳಲಾಗ್ತಿದೆ.

ಮುಖಂಡರ ಮಾತುಗಳನ್ನು ಶಾಂತ ಚಿತ್ತದಿಂದ ಆಲಿಸಿದ ದೇವೇಗೌಡರು ಮತ್ತು ಕುಮಾರಸ್ವಾಮಿ ಅಸಮಾಧಾನಿತ ಮುಖಂಡರಿಗೆ ಸಮಾಧಾನ ಹೇಳಿದರು. ಅಮಿತ್ ಶಾ, ನಡ್ಡಾ ಜೊತೆ ಮಾತನಾಡುವಂತೆ ಕುಮಾರಸ್ವಾಮಿಗೆ ಸೂಚನೆ ನೀಡಿದ ದೇವೇಗೌಡರು; ಇಲ್ಲವಾದರೆ ನಾನೇ ದೆಹಲಿಗೆ ಹೋಗಿ ಬರುತ್ತೇನೆ ಇದೇ ವೇಳೆ ಹೇಳಿದ್ದಾರೆ ಎನ್ನಲಾಗಿದೆ.

ಕೋಲಾರ ಕ್ಷೇತ್ರದ ಒಳ್ಳೆಯ ನಿರ್ಧಾರ ತೆಗೆದುಕೊಳ್ಳೋಣ ಎಂದು ಅಮಿತ್ ಶಾ ಅವರೇ ಹೇಳಿದ್ದಾರೆ ಎಂದು ಸಭೆಗೆ ತಿಳಿಸಿದ ಕುಮಾರಸ್ವಾಮಿ, "ಯಾವುದೇ ಕಾರಣ–ಕ್ಕೂ ಪಕ್ಷದ ಹಿತಕ್ಕೆ ವಿರುದ್ಧವಾಗಿ ಹೆಜ್ಜೆ ಇಡುವುದಿಲ್ಲ. ಇದು ಬಿಜೆಪಿ ನಾಯಕ–ರಿಗೂ ಗೊತ್ತಿದೆ" ಎಂದು ತಿಳಿಸಿದ್ದಾರೆ.

ರಾಜ್ಯ ಕೋರ್ ಕಮಿಟಿ ಅಧ್ಯಕ್ಷ ಜಿ.ಟಿ.ದೇವೇಗೌಡ, ಮಾಜಿ ಸಚಿವರಾದ ಹೆಚ್.ಡಿ.ರೇವಣ್ಣ, ಲೀಲಾದೇವಿ ಆರ್ ಪ್ರಸಾದ್, ಬಂಡೆಪ್ಪ ಕಾಶೆಂಪೂರ್, ವೆಂಕಟರಾವ್ ನಾಡಗೌಡ, ಯುವ ಜನತಾದಳದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ, ಸಂಸದ ಪ್ರಜ್ವಲ್ ರೇವಣ್ಣ, ಶಾಸಕ ಜಿ.ಕೆ.ವೆಂಕಟ ಶಿವಾರೆಡ್ಡಿ, ಬಿ.ಸುರೇಶ್ ಬಾಬು, ಕರೆಮ್ಮ ನಾಯಕ್, ನೇಮಿರಾಜ್ ನಾಯಕ್, ಸ್ವರೂಪ್ ಪ್ರಕಾಶ್, ರಾಜೂಗೌಡ, ಬಿ.ಎಂ. ಫಾರೂಕ್, ಎಂ.ಟಿ.ಕೃಷ್ಣಪ್ಪ, ಕೆ.ಎ.ತಿಪ್ಪೇಸ್ವಾಮಿ, ಟಿ ಎ ಶರವಣ, ಮಂಜೇಗೌಡ, ಮಾಜಿ ಶಾಸಕರಾದ ರಾಜಾ ವೆಂಕಟಪ್ಪ ನಾಯಕ ದೊರೆ, ಕೆಎಂ.ಕೃಷ್ಣಾರೆಡ್ಡಿ, ಡಿ.ನಾಗರಾ–ಜಯ್ಯ, ಡಾ.ಕೆ.ಅನ್ನದಾನಿ, ದೊಡ್ಡನಗೌಡ ಪಾಟೀಲ್, ಸಿ.ಎಸ್.ಪುಟ್ಟರಾಜು, ಸುರೇಶ್ ಗೌಡ, ಶ್ರೀಕಂಠೇಗೌಡ, ಸುರೇಶ್ ಗೌಡ, ರವೀಂದ್ರ ಶ್ರೀಕಂಠಯ್ಯ, ಕೆ.ಪಿ.ಬಚ್ಚೇಗೌಡ, ದೇವಾನಂದ ಚೌಹಾಣ್, ಶಿವಶಂಕರ್, ಚೌಡರೆಡ್ಡಿ ತೂಪಲ್ಲಿ ಸೇರಿದಂತೆ ಪಕ್ಷದ ಹಲವಾರು ಮುಖಂಡರು, ಕೋರ್ ಕಮಿಟಿ ಸದಸ್ಯರು ಹಾಗೂ ಎಲ್ಲಾ ಲೋಕಸಭೆ ಕ್ಷೇತ್ರಗಳ ಚುನಾವಣೆ ಉಸ್ತುವಾರಿಗಳು ಉಪಸ್ಥಿತರಿದ್ದರು.

## ರಾಜ ನುಡಿ

ಹಿರಿಯರು ಹೇಳಿದಂತೆ ಪೂಜೆ, ನಮಾಜ್, ಪ್ರೇಯರ್ ಗಳಲ್ಲಿ ಅವನನ್ನ ತುಂಬಾ ಹುಡುಕಿದೆ ಕೊನೆಗೆ ಅವನು ಸಿಕ್ಕಿದ್ದು ಪ್ರೇಮ, ಸೇವೆ, ಸ್ನೇಹ, ಸಹಾಯ, ಸಹಾನುಭೂತಿಯಲ್ಲಿ. ಎಲ್ಲೋ ಇರುವುದನ್ನು ಇನ್ನೆಲ್ಲೋ ಹುಡುಕುತ್ತಾ ಜೀವನ ಮುಗಿಸುತ್ತೇವೆ.

–ಡಾ. ರಾಜಶೇಖರ ನಾಗೂರ

## ಪರವಾನಿಗೆ ಪಡೆದ ಶಸ್ತ್ರಾಸ್ತ್ರಗಳ ಠೇವಣಿಗೆ ಆದೇಶ

ಉದಯರಶ್ಮಿ ನ್ಯೂಸ್

ವಿಜಯಪುರ: ಸಾರ್ವತ್ರಿಕ ಲೋಕಸಭೆ ಚುನಾವಣೆ –2024 ಪ್ರಯುಕ್ತ ಈಗಾಗಲೇ ನೀತಿ ಸಂಹಿತೆ ಜಾರಿಯಲ್ಲಿದೆ. ಈ ವೇಳೆ ಕಾನೂನು ಸುವ್ಯವಸ್ಥೆ ಕಾಪಾಡಲು ಮತ್ತು ಚುನಾವಣೆಯನ್ನು ಮುಕ್ತ ಹಾಗೂ ಶಾಂತಿಯುತವಾಗಿ ನಡೆಸಲು ಸಾರ್ವಜನಿಕರು ಪಡೆದಂತಹ ಪರವಾನಿಗೆ ಪಡೆದ ಶಸ್ತ್ರಾಸ್ತಗಳ ಠೇವಣಿ ಕುರಿತು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿ ಅವರ ಅಧ್ಯಕ್ಷತೆಯಲ್ಲಿ ಸ್ಕ್ರೀನಿಂಗ್ ಕಮಿಟಿ ರಚಿಸಲಾಗಿದೆ.

ಸಾರ್ವಜನಿಕರು ಪರವಾನಿಗೆ ಪಡೆದ ಶಸ್ತ್ರಾಸ್ತ್ರಗಳ ಠೇವಣಿಯಿಂದ ವಿನಾಯತಿ ಪಡೆಯ ಬಯಸುವವರು ಮಾ.25 ಒಳಗಾಗಿ ತಮ್ಮ ಮನವಿಗಳನ್ನು ಪೊಲೀಸ್ ಉಪಾಧೀಕ್ಷಕರ ಕಚೇರಿಗೆ ಮನವಿ ಸಲ್ಲಿಸಬಹುದಾಗಿದೆ. ಸಾರ್ವಜನಿಕರಿಂದ ಸ್ವಿಕೃತವಾದ ಮನವಿಗಳನ್ನು ಸ್ಕ್ರೀನಿಂಗ್ ಯಲ್ಲಿ ಪರಿಶೀಲಿಸಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಟಿ. ಭೂಬಾಲನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾನೆಂದೂ ಸೇಡಿನ ರಾಜಕಾರಣ ಮಾಡಿಲ್ಲ :ಜಿಗಜಿಣಗಿ

ಉದಯರಶ್ಮಿ ನ್ಯೂಸ್

ಇಂಡಿ: ವಿಜಯಪುರ ಮತಕ್ಷೇತ್ರಕ್ಕೆ ಕಳೆದ 10 ವರ್ಷಗಳಲ್ಲಿ ಒಂದು ಲಕ್ಷ ಕೋಟಿ ರೂ ಅನುದಾನ ತಂದು ವಿವಿಧ ರೀತಿಯ ಅಭಿವೃದ್ಧಿ ಕಾರ್ಯ ಮಾಡಿದ್ದೇನೆ ಎಂದು ಸಂಸದ ರಮೇಶ ಜಿಗಜಿಣಗಿ ಹೇಳಿದರು.

ಪಟ್ಟಣದ ಶ್ರೀ ಶಾಂತೇಶ್ವರ ಮಂಗಲ ಕಾರ್ಯಾಲಯದಲ್ಲಿ ಇಂಡಿ ವಿಧಾನಸಭಾ ಮತಕ್ಷೇತ್ರದ ಲೋಕ ಸಭಾ ಚುನಾವಣೆಯ ಚುನಾವಣೆ ನಿರ್ವಹಣಾ ಸಮಿತಿ ಸಭೆಯಲ್ಲಿ ಮಾತನಾಡುತ್ತಿದ್ದರು.

ಅಕ್ಕಲಕೋಟ – ವಿಜಯಪುರ 100 ಕಿಮಿ 1000 ಕೋಟಿ ವೆಚ್ಚದಲ್ಲಿ ರಾಷ್ಟ್ರೀಯ ಹೆದ್ದಾರಿ ಕಾರ್ಯ, ಚತುಷ್ಪ ರಸ್ತೆಗಳು, ರೇಲ್ವೆ ಬ್ರಾಡಗೇಜ ಅಗಲೀಕರಣ, ರೇಲ್ವೆ ಸ್ಟೇಷನ್ ನವೀಕರಣ, ರೇಲ್ವೆ ಓಡಾಟಕ್ಕೆ ವಿದ್ಯುತ್ ಸಂಪರ್ಕ, ವಿಮಾನ ನಿಲ್ದಾಣ, ಕೂಡಗಿ ಥರ್ಮಲ್ ಪವರ್ ಸೇರಿದಂತೆ ಅನೇಕ ಕಾರ್ಯ ಮಾಡಿರುವುದಾಗಿ ತಿಳಿಸಿದರು.

ಇಂಡಿಯ ಶ್ರೀ ರೇವಣಸಿದ್ದೇಶ್ವರ ಏತ ನೀರಾವರಿಗೆ ರೂ 3000 ಕೋಟಿ ಅನುದಾನ, ಗುರುತ್ವಾಕರ್ಷಣೆ ಮೇಲೆ ಕೆರೆಗಳನ್ನು ತುಂಬಿಸುವದು ಸೇರಿದಂತೆ ಜಲಜೀವನ ಮಿಷನ ನಿಂದ ಪ್ರತಿ ಗ್ರಾಮದವರಿಗೂ ಕುಡಿಯುವ ನೀರು ದೊರೆಯುವಂತೆ ಮಾಡಿದ್ದೇನೆ ಎಂದರು.

ತಾನು ಭಾವನಾತ್ಮಕ ಸಂಬಂಧವಿಟ್ಟುಕೊಂಡು ರಾಜಕೀಯ ಮಾಡಿದ್ದೇನೆ. ಸೇಡಿನ ಜಾತಿಯ ರಾಜ–ಕಾರಣ ಎಂದು ಮಾಡಿಲ್ಲ. ಮೂರು ಬಾರಿ ಶಾಸಕನಾಗಿ, ಮೂರು ಬಾರಿ ಚಿಕ್ಕೋಡಿ ಸಂಸದನಾಗಿ, ಮತ್ತೆ ಎರಡು ಬಾರಿ ವಿಜಯಪುರ ಸಂಸದ ನಾಗುವಲ್ಲಿ ಇಂಡಿಯ ಜನರ ಆಶೀರ್ವಾದವಿದೆ. ಎಲ್ಲ ಸಮಾಜದ ಜೊತೆ ಒಳ್ಳೆ ಸಂಬಂಧವಿದ್ದು ಇನ್ನು ಮುಂದೆ ಇನ್ನೂ ಒಳ್ಳೆಯ ಕಾರ್ಯ ಮಾಡಿ ಇಂಡಿಯ ಇತಿಹಾಸ ನಿರ್ಮಿಸುವ ಕಾರ್ಯ ಮಾಡುತ್ತೇನೆ ಎಂದ ಅವರು ತಾನು ಇಂಡಿ ತಾಲೂಕಿನವ ಎಂದು ಪ್ರತಿ ಬಾರಿಯು ನನ್ನನ್ನು ಹೆಚ್ಚಿನ ಮತ ನೀಡಿ ಬೆಂಬಲಿಸಿದ್ದೀರಿ.ಅದಕ್ಕೆ ಪ್ರತಿಯಾಗಿ ನಿಮ್ಮ ಸೇವೆ ಮಾಡುತ್ತೇನೆ ಎಂದರು.



ರಾಜ್ಯ ನಿಂಬೆ ಅಭಿವೃದ್ಧಿ ಮಂಡಳಿ ಮಾಜಿ ಅಧ್ಯಕ್ಷ ಅಶೋಕ ಅಲ್ಲಾಪುರ , ವಿಧಾನ ಪರಿಷತ್ತ ಮಾಜಿ ಸದಸ್ಯ ಅರುಣ ಶಹಾಪುರ, ಚಂದ್ರಶೇಖರ ಕವಟಗಿ, ಇಂಡಿ ಮಂಡಲ ಅಧ್ಯಕ್ಷ ಮಲ್ಲಿಕಾರ್ಜುನ ಕಿವಡೆ,ಕಾಸುಗೌಡ ಬಿರಾದಾರ, ಪುರಸಭೆ ಮಾಜಿ ಅಧ್ಯಕ್ಷ ಹಾಲಿ ಸದಸ್ಯ ದೇವೇಂದ್ರ ಕುಂಬಾರ ಮಾತನಾಡಿದರು.

ವೇದಿಕೆಯ ಮೇಲೆ ಬಿ.ಎಸ್.ಪಾಟೀಲ ಹಿರೇಬೇವನೂರ, ಸಿದ್ದಲಿಂದ ಹಂಜಗಿ, ಶೀಲವಂತ ಉಮರಾಣಿ, ಹಣಮಂತಗೌಡ ಪಾಟೀಲ, ಮಲ್ಲುಗೌಡ ಪಾಟೀಲ, ಅನೀಲಗೌಡ ಬಿರಾದಾರ, ಶ್ರೀಕಾಂತ ದೇವರ, ಅನೀಲ ಜವಾದಾರ, ಶಂಕರಗೌಡ ಪಾಟೀಲ, ಶ್ರೀಪತಿಗೌಡ ಬಿರಾದಾರ, ವೇಂಕಟೇಶ ಕುಲಕರ್ಣಿ ಮತ್ತಿತರಿದ್ದರು.

## ವಚನ ಚಿಂತನ 226



### ನಿಘೂಢ ಬಯಲು

*ಬಯಲಿಂದಲೆ ಹುಟ್ಟಿ, ಬಯಲಿಂದಲೆ ಬೆಳೆದು,*
*ಬಯಲಾಮೃತವನೆ ಉಂಡು,*
*ಬಯಲನೆ ಉಟ್ಟು, ಬಯಲನೆ ತೊಟ್ಟು,*
*ಬಯಲು ಬಯಲೊಳಗೆ ಬೆರೆದ ಭೇದವ,*
*ಈ ಭುವನದೊಳಗೆ ಇಪ್ಪ ಭವಭಾರಿಗಳು ಎತ್ತಬಲ್ಲರು,*
*ಭವವಿರಹಿತ ಶರಣರ ನಿಲವ, ಬಸವಪ್ರಿಯ ಕೂಡಲಚನ್ನಬಸವಣ್ಣಾ ?*

– ಹಡಪದ ಅಪ್ಪಣ್ಣನವರು

ರೂಪಿನಿಂದಾಚೆಯ ಬಯಲಿನಲ್ಲಿ ದೇವರ ನೈಜ ಸ್ವರೂಪವನ್ನು ಕಂಡ 12ನೇ ಶತಮಾನದ ಶರಣರು ಅಂದು ವಸ್ತು, ವ್ಯಕ್ತಿಗಳಲ್ಲಿ ದೇವ–ರಿರುವನೆಂದು ನಂಬಿಸಿ ಮೊಸಗೊಳಿಸುವವ–ರಿಂದ ಜನಸಾಮಾನ್ಯರನ್ನು ಎಚ್ಚರಿಸುವ ಕಳಕಳಿಯನ್ನು ಹಡಪದ ಅಪ್ಪಣ್ಣನವರ ಈ ವಚನದಲ್ಲಿ ನಾವು ಕಾಣುತ್ತೇವೆ. ಬಯಲಿನಿಂದ ಉದಯಿಸಿದ ಈ ಅಂಗ/ಆತ್ಮ/ಜೀವ/ಪ್ರಾಣವು ಬಯಲಿನಲ್ಲಿ ಬೆಳೆದು ಅಳಿದು ಇಲ್ಲವಾಗುವ ಪ್ರಕ್ರೀಯೇ ಬದುಕು. ಈ ಬದುಕನ್ನು ರೂಪಿಸಿ ಮುನ್ನೆಡೆಸುತ್ತಿರುವ ಚೈತನ್ಯ(ಮಹಾಲಿಂಗ)ದ ಸ್ವರೂಪವನ್ನು ಈ ಭುವನದೊಳಗಿಪ್ಪ ಭವಭಾರಿಗಳು ಎತ್ತಬಲ್ಲರು ಎಂದಿದ್ದಾರೆ. ಆದರೆ ಈ ನಿಗೂಢ ಅಂತಿಮ ಸತ್ಯವನ್ನು ತಾವು(ಭವವಿರಹಿತ ಶರಣ)ಮಾತ್ರ ಅರಿತಿ–ರುವುದಾಗಿ ಹೆಮ್ಮೆಯಿಂದ ಹೇಳಿಕೊಂಡಿದ್ದಾರೆ. ಅಂದಿನಿಂದ ಇಂದಿನವರೆಗೂ ಬಯಲು ಎಂಬುದು ವಿಜ್ಞಾನಿಗಳು ಮತ್ತು ದಾರ್ಶನಿಕರಿಗೆ ಅತ್ಯಂತ ನಿಗೂಢ ಮತ್ತು ಆಸಕ್ತಿದಾಯಕ ವಿಷಯವಾಗಿದೆ. ವಿಜ್ಞಾನಿಗಳ ಸಂಶೋಧನೆ ಪ್ರಕಾರ ಈ ಬಯಲೆಂಬುದು (space). ಬೆಳಕಿನ ಮಿತಿಗಳನ್ನು ಮೀರಿದ ಜಾಗ, ಅದನ್ನು ನಾವು ನೋಡಲಾಗುವುದಿಲ್ಲ. ಬ್ರಹ್ಮಾಂಡವನ್ನೊಳಗೊಂಡ ಖಾಲಿ ಜಾಗವನ್ನು ವಿಜ್ಞಾನಿಗಳು ಬಯಲೆನ್ನುತ್ತಾರೆ ಅದರ ವ್ಯಾಸವು ಕನಿಷ್ಠ 93 ಶತಕೋಟಿ ಜ್ಯೋತಿರ ವರ್ಷಗಳು(8.80 ×1026 metres l y)ಆದರೆ ಶರಣರ ಬಯಲು ಇದನ್ನು ಮೀರಿದವಿಸ್ತಾರವನ್ನು ಹೊಂದಿದೆ. ಅದು ಅಗಮ್ಯ, ಅನಂತ, ಅಪರಿಮಿತ, ಅಪ್ರಮಾಣ. ಈ ಭುವನದೊಳಗೆ ಇಪ್ಪ ಭವಭಾರಿಗಳು ಎತ್ತಬಲ್ಲರು, ಇಂಥ ಬಲಯ ಸ್ವರೂಪದ ಶರಣನ ನಿಲುವ ವೆಂದಿದ್ದಾರೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

ಬಿಸಿಲಿನ ತಾಪದಲ್ಲೂ ಪತ್ರಾಸ್ ಶೆಡ್ಡಿನಲ್ಲಿ ಕಾರ್ಯ | ಕೂಡಗಿ ಪೋಲೀಸರಿಗೆ ನರಕಯಾತನೆ | ದೂರುದಾರರಿಗೆ ಹೊರಗಡೆಯೇ ನಿಲ್ಲಿಸಿ ವಿಚಾರಣೆ

# ರಕ್ಷಣೆ ನೀಡುವ ಆರಕ್ಷಕರಿಗೆ ಕಟ್ಟಡ ಭಾಗ್ಯದ ಕೊರತೆ

ಉದಯರಶ್ಮಿ ನ್ಯೂಸ್

ಕೊಲ್ಹಾರ: ಬೇಸಿಗೆಯ ಕಾಲದಲ್ಲಿ ಬಿಸಿಲಿನ ತಾಪದ ಝಳ ಮಳೆಗಾಲ ಬಂತೆಂದರೆ ಮಳೆರಾಯನ ಆಗಮನದ ಜೋರಾದ ಸಪ್ಪಳ ಚಳಿಗಾಲದಲ್ಲಿ ಬೆಚ್ಚಗಿನ ನಡುವೆಯೂ ಚಳಿ ಚಳಿ ತಾಳಿಕೊಂಡು ಸೇವೆಯನ್ನು ಸಲ್ಲಿಸುವ ಅನಿವಾರ್ಯ ಪರಿಸ್ಥಿತಿಯ ಕಚೇ–ರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಆರಕ್ಷಕರ ಹಲವಾರು ವರ್ಷಗಳ ದುಸ್ಥಿತಿಯ ಚಿತ್ರಣ.

ಇಂತಹ ಪರಿಸ್ಥಿತಿಯಲ್ಲಿ ಕಾರ್ಯನಿರ್ವಹಿಸುತ್ತಿರುವವರು ವಿಜಯಪುರ ಜಿಲ್ಲೆಯ ಕೊಲ್ಹಾರ ತಾಲೂಕಿನ ಕೂಡಗಿ ಪೋಲೀಸ್ ಠಾಣೆಯ (ಆರಕ್ಷಕ) ಠಾಣಾಧಿಕಾರಿಗಳು ಸೇ–ರಿದಂತೆ ಸಿಬ್ಬಂದಿ ವರ್ಗದವರು ಅನುಭವಿಸುತ್ತಿರುವ ನರಕಯಾತನೆ ಹೇಳತೀರದು. ಸಾರ್ವಜನಿಕ–ರಿಗೆ ಗಣ್ಯರಿಗೆ ರಕ್ಷಣೆ ಕೊಡುವ ಆರಕ್ಷಕ ಇಲಾಖೆಯ ಸಿಬ್ಬಂದಿ ವರ್ಗದವರಿಗೆ ಸುಸಜ್ಜಿತವಾದ ಸ್ವಂತ ಇಲಾಖಾ ಕಟ್ಟಡವಿಲ್ಲದೇ ಕಾರ್ಯನಿರ್ವಹಿಸುವಂತಹ ಸರಕಾರಿ ಸೇವೆ ಸಲ್ಲಿಸುತ್ತಿರುವ ಅವರಿಗೆ ಕಟ್ಟಡ ಭಾಗ್ಯ ದೊರಕುವದು ಯಾವಾಗ ಎನ್ನುವಂತಾಗಿದೆ.

ಸುಮಾರು 15 ವರ್ಷಗಳ ಹಿಂದೆ ಕೂಡಗಿ ಉಷ್ಣ ವಿದ್ಯುತ್ ಸ್ಥಾವರದ ಘಟಕ ಉದ್ಘಾಟನೆ ಮಾಡಬಾರದು ಎನ್ನುವ ರೈತ ವಿರೋಧಿ ಪ್ರತಿಭಟನೆಯ ಸಂದರ್ಭದಲ್ಲಿ ನಡೆದ ಅವಾಂತರವನ್ನು ಗಮನಿಸಿದ ಎನ್.ಟಿ.ಪಿ.ಸಿ ಅಧಿಕಾರಿಗಳು ರಾಜ್ಯ ಸರಕಾರಕ್ಕೆ ಎನ್‌ಟಿಪಿಸಿ ರಕ್ಷಣೆಗಾಗಿ ಆರಕ್ಷಕ ಠಾಣೆ ಮಂಜೂರು ಮಾಡಬೇಕೆಂದು ಪತ್ರ ಬರೆದ ಪ್ರಯುಕ್ತ ಅಖಂಡ ಬಸವನ ಬಾಗೇವಾಡಿ ತಾಲೂಕಿನ ಹತ್ತು ಗ್ರಾಮಗಳನ್ನು ಸೇರಿಸಿ ಮತ್ತು ಕೇಂದ್ರಸರಕಾರದ ಸ್ವಾಮಿತ್ವದ ಕೂಡಗಿ ಎನ್‌ಟಿಪಿಸಿಗಾಗಿ ಸರಕಾರವು ಹೊಸ ಪೋಲೀಸ್ ಠಾಣೆಯನ್ನು ಮಂಜೂರು ಮಾಡಿದ್ದು ಪೋಲೀಸ್ ಠಾಣೆಗೆ ಸ್ಥಳಾವಕಾಶ ಕಲ್ಪಿಸಿಕೊಡಲಾಗುವದು ಎಂದು ಎನ್‌ಟಿಪಿಸಿ ಅಧಿಕಾರಿಗಳು ಒಪ್ಪಿಗೆಯನ್ನು ಸೂಚಿಸಿದ್ದರು.






" ರೈತರ ಗಲಭೆಯಾದಾಗ ಎನ್‌ಟಿಪಿಸಿ ಅಧಿಕಾರಿಗಳು ಪೋಲೀಸ್ ಠಾಣೆಗೆ ಸ್ಥಳಾವಕಾಶ ಮಾಡಿಕೊಡುತ್ತೇವೆ ಎಂದು ಭರವಸೆ ಕೊಟ್ಟಂತೆ ನಡೆದುಕೊಳ್ಳದ ಪ್ರಯುಕ್ತ ನಮ್ಮ ಸಿಬ್ಬಂದಿ ವರ್ಗದವರು ಪತ್ರಾಸ ಶೆಡ್‌ನಲ್ಲಿ ಸೇವೆಯನ್ನು ಸಲ್ಲಿಸುತ್ತಿದ್ದು ಎನ್‌ಟಿಪಿಸಿ ಅವರು ಜಾಗ ಮಂಜೂರು ಮಾಡಿದರೆ ಮೇಲಾಧಿಕಾರಿಗಳ ಗಮನಕ್ಕೆ ತಂದು ಸ್ವಂತ ಕಟ್ಟಡ ನಿರ್ಮಾಣ ಮಾಡಲಾಗುವುದು. ಹಲವಾರು ಬಾರಿ ವಿನಂತಿಸಿದರೂ ಎನ್‌ಟಿಪಿಸಿ ಅಧಿಕಾರಿಗಳು ಮುಂದಕ್ಕೆ ಹಾಕುತ್ತಾ ಸಾಗುತ್ತಿರುವುದೇ ಸ್ವಂತ ಕಟ್ಟಡ ಇಲ್ಲದಂತಾಗಿದೆ."

– ಶರಣಗೌಡ ಪಾಟೀಲ, ನಿಡಗುಂದಿ ಸಿಪಿಐ

ಆದರೂ ಜಾಗ ದೊರೆಯದೇ ಕೂಡಗಿ ಪೋಲೀಸ್ ಠಾಣೆ ಆಲಮಟ್ಟಿ ಮುಳವಾಡ ಜಿಲ್ಲಾ ಮುಖ್ಯ ರಸ್ತೆಯ ಎನ್‌ಟಿಪಿಸಿ ಘಟಕದ ಆವರಣಗೋಡೆಗೆ ಹೊಂದಿಕೊಂಡು ಇಕ್ಕಟ್ಟಾದ ತಿರುವಿನ ಹೆಚ್ಚುವರಿ ಜಾಗದಲ್ಲಿ ಕಾರ್ಯನಿರ್ವಹಿಸುತ್ತಿರುವದು ಪಕ್ಕದಲ್ಲಿ ಇರುವ ಎನ್‌ಟಿಪಿಸಿ ಮಹಾಪ್ರಭಂದಕ ಅಧಿಕಾರಿಗಳ ಗಮನಕ್ಕೆ ಬಂದಿಲ್ಲವೋ ಅಥವಾ ರಾಜ್ಯ ಗೃಹ ಇಲಾಖೆಯ ಅಧಿಕಾ–ರಿಗಳು ಒತ್ತಡ ಹಾಕದೇ ಹೇಗಿದ್ದರೂ ನಡೆದಿದೆಯಲ್ಲ ಎನ್ನುವ ಉದಾರ ಮನೋಭಾವದ ಮನಸ್ಥಿತಿಯ ಮಧ್ಯ ಕಾರ್ಯನಿರ್ವಹಿಸುತ್ತಿರುವ ಆರಕ್ಷಕ ಸಿಬ್ಬಂದಿಯ ಗೋಳು ಹೇಳಲು ಅಸಾಧ್ಯವಾಗಿದೆ.



ಠಾಣಾಧಿಕಾರಿಗಳಿಗೆ ಒಂದು ಕೋಣೆ, ಸಿಬ್ಬಂದಿ ವರ್ಗದವ–ರಿಗೆ ಒಂದು ಕೋಣೆ ಹೆಚ್ಚುವ–ರಿಯಾಗಿ ಒಂದು ಕೋಣೆಯನ್ನು ಸುಮಾರು ಎರಡು ಗುಂಟೆ ಜಾಗದಲ್ಲಿ ಪತ್ರಾಸ ಶೆಡ್ ಹಾಕಿ ನಿರ್ಮಾಣ ಮಾಡಿರುವದರಲ್ಲಿಯೇ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ವಾಹನಗಳು ಅಫಘಾತಕ್ಕೀಡಾದಾಗ ಯಾವುದೇ ಗ್ರಾಮದಲ್ಲಿ ವ್ಯಾಜ್ಯಗಳು ನಡೆದು ದೂರು ಸಲ್ಲಿಸಲು ದೂರುದಾರರು ಬಂದಾಗ ಹೊರಗಡೆಯೇ ನಿಲ್ಲಿಸಿ ತನಿಖೆ ಮಾಡುವಂತಹ ಮತ್ತು ವಾಹನಗಳನ್ನು ನಿಲ್ಲಿಸಲು ಜಾಗದ ಕೊರತೆ ಆಗುತ್ತಿರುವದನ್ನು ಇನ್ನೂ ಎಷ್ಟು ದಿನ ಕೂಡಗಿ ಪೋಲೀಸ್ ಠಾಣೆಯಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿ ತಡೆದುಕೊಳ್ಳಬೇಕು ಎನ್ನುವುದು ಸಾರ್ವಜನಿಕರ ಯಕ್ಷ ಪ್ರಶ್ನೆಯಾಗಿದೆ.

"ಸಾರ್ವಜನಿಕ ಸೇವೆಯಲ್ಲಿರುವ ಕೂಡಗಿ ಪೋಲೀಸ್ ಠಾಣೆಯ ಆರಕ್ಷಕ ಸಿಬ್ಬಂದಿ ವರ್ಗದವರಿಗೆ ಪೋಲೀಸ್ ಠಾಣೆಗೆ ಜಾಗ ಮತ್ತು ಸುಸಜ್ಜಿತವಾದ ಕಟ್ಟಡ ನಿರ್ಮಾಣ ಮಾಡಲು ಸಚಿವರಾದ ಶಿವಾನಂದ ಪಾಟೀಲ ಸಾಹೇಬರು ಎನ್‌ಟಿಪಿಸಿ ಅಧಿಕಾರಿಗಳ ಮೇಲೆ ಒತ್ತಡ ಹಾಕಿ ಮಂಜೂರು ಮಾಡಿಸಬೇಕು. ಈಗಾಗಲೇ ಎನ್‌ಟಿಪಿಸಿ ಅಧಿಕಾರಿಗಳು ಹಲವಾರು ಸಾರ್ವಜನಿಕ ಸೇವೆಯ ಸರಕಾರಿ ಕಚೇರಿಗಳಿಗೆ ಶಿಕ್ಷಣ ಸಂಸ್ಥೆಗಳಿಗೆ ಸಹಾಯ ಸಹಕಾರ ನೀಡಿದಂತೆ ತಮ್ಮ ರಕ್ಷಣೆಗಾಗಿಯೇ ಇರುವ ಕೂಡಗಿ ಪೋಲೀಸ್ ಠಾಣೆಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಅನುವು ಮಾಡಿಕೊಡಬೇಕು."

– ಈರಣಗೌಡ ಬ ಕೋಮಾರ,
ಕೊಲ್ಹಾರ ತಾಲೂಕು ರಚನಾ ಹೋರಾಟ ಸಮಿತಿ ಅಧ್ಯಕ್ಷ

# ಚೆಕ್ ಪೋಸ್ಟ್‌ಗಳಿಗೆ ಡಿಸಿ ದಿಡೀರ್ ಭೇಟಿ



**ಉದಯರಶ್ಮಿ ನ್ಯೂಸ್**

ವಿಜಯಪುರ: ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿ ಟಿ. ಭೂ ಬಾಲನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ರಿಶಿ ಆನಂದ ಹಾಗೂ ಪೊಲೀಸ್ ವರಿಷ್ಠಾಧಿಕಾರಿ ಋಷಿಕೇಶ್ ಸೋನಾವಣೆ ಅವರು ಜಿಲ್ಲೆಯ ವಿವಿಧ ಚೆಕ್ ಪೋಸ್ಟ್ ಗಳಿಗೆ ದಿಡೀರ್ ಭೇಟಿ ನೀಡಿ ಚೆಕ್ ಪೋಸ್ಟಗಳ ಕಾರ್ಯವೈಖರಿ ಪರಿಶೀಲನೆ ನಡೆಸಿದರು.

ಕೊಂಕಣಗಾವ, ಶಿರಡೋಣ. ಕನಕನಾಳ ಹಾಗೂ ಧೂಳಖೆಡ್ ಚೆಕ್ ಪೋಸ್ಟಗಳಿಗೆ ಡಿ ಸಿ ಹಾಗೂ ತಂಡ ತೆರಳಿ ಕಾರು, ಟ್ರಕ್ ಸೇ–ರಿದಂತೆ ವಿವಿಧ ವಾಹನಗಳನ್ನು ತಪಾಸಣೆ ಮಾಡಿದರು.

# ಓಬಿಸಿ, ಅಲ್ಪಸಂಖ್ಯಾತ, ರೈತ, ಮಹಿಳಾ ಮೋರ್ಚಾ ಗೆ ನೇಮಕ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲಾ ಅಧ್ಯಕ್ಷರ ಸೂಚನೆ ಮೇರೆಗೆ ಬಿಜೆಪಿ ನಗರ ಮಂಡಲದ ಓಬಿಸಿ ಮೋರ್ಚಾ, ಅಲ್ಪಸಂಖ್ಯಾತರ ಮೋರ್ಚಾ, ರೈತ ಮೋರ್ಚಾ, ಮಹಿಳಾ ಮೋರ್ಚಾಗೆ, ಈ ಕೆಳಕಂಡ ಮುಖಂಡರನ್ನು ಪದಾಧಿಕಾರಿಗಳನ್ನಾಗಿ ನೇಮಕ ಮಾಡಿ ನಗರ ಮಂಡಲ ಅಧ್ಯಕ್ಷ ಶಂಕರ ಹೂಗಾರ ಆದೇಶ ಹೊರಡಿಸಿದ್ದಾರೆ.

**ಹಿಂದುಳಿದ ವರ್ಗಗಳ ಮೋರ್ಚಾ:**

ಉಪಾಧ್ಯಕ್ಷರು ನೀತಿನ ಖಂಡಾಗಳೆ, ಭೀಮರಾಯ ಮಾಶ್ಯಾಳ, ಸಂಜು ಬಡಿಗೇರ (ಜೈ ಜನುಮಾನ ನಗರ), ಸತೀಶ ಅಗಸರ, ರಾಹುಲ ಪನಾಳಕರ, ಕಾರ್ಯದರ್ಶಿಗಳು ಪ್ರಭಾಕರ ಪೂಜಾರಿ, ಮಹಾರಾಜ ಕೋಟಗೊಂಡ, ಜಟ್ಟಿಂಗರಾಯ ಹುಲ್ಲೂರ, ನಾಗರಾಜ ನಿಂಬಾಳ, ಶ್ರೀಧರ ಮಹೀಂದ್ರಕರ, ಕೋಶಾಧ್ಯಕ್ಷರು ಧನಂಜಯ ನಿಮಾಗ್ರೆ.

ಅಲ್ಪಸಂಖ್ಯಾತರ ಮೋರ್ಚಾ:

ಉಪಾಧ್ಯಕ್ಷರು ಪಾರೀಶ ಶಿರಹಟ್ಟಿ, ಭರಮಣ್ಣ ಶೆಟ್ಟಿ, ಶೀತಲ ಮಹಾವೀರ ಪಾಟೀಲ, ಸಿಮೋನ್ ಗೌಡಲ್ಲರ್, ಕಾರ್ಯದರ್ಶಿಗಳು ಜಾನ್ಸನ್ ಗೌಡ್ಯಾಳರ, ಸಂಪತ್ ವಣಕುದರಿ, ಸನ್ನಿ ಪೋರವಾಲ, ಪ್ರಶಾಂತ ಕೇಶಿ, ಮಂಜುನಾಥ ಸೌದಿ, ಕೋಶಾಧ್ಯಕ್ಷರು ಅನೀಲ ಬಾಗೇವಾಡಿ.

ಮಹಿಳಾ ಮೋರ್ಚಾ:

ಉಪಾಧ್ಯಕ್ಷರು ಮೀನಾ ಕುಂದನಗಾರ, ಮೀತಾ ದೇಸಾಯಿ, ಮಂಗಲಾಬಾಯಿ ಚವ್ಹಾಣ, ಕಾವೇರಿ ದಯಾನಂದ ಸ್ವಾಮಿ, ರಶ್ಮೀ ಆಳಗಿ, ಕಾರ್ಯದರ್ಶಿಗಳು ಭಾರತಿ ತೇಲಿ, ವೈಶಾಲಿ ಅಗಸರ, ಶುಭಾಂಗಿ ಇಂಗಳೆ, ಲಲಿತಾ ಮರೆಗುದ್ದಿ, ದೀಪಾ ಭಿಸೆ, ಕೋಶಾಧ್ಯಕ್ಷರು ಗೀತಾ ಗಿಡವೀರ

ರೈತ ಮೋರ್ಚಾ:

ಉಪಾಧ್ಯಕ್ಷರು ವಿಜಯಕುಮಾರ್ ಗಚ್ಚಿನಕಟ್ಟಿ, ಎಸ್.ಆರ್.ಬುಕ್ಕಣ್ಣಿ, ಹಣಮಂತ ಪಟ್ಟೇದ, ಪ್ರವೀಣಪ್ರಸಾದ ಪಾಂಡೆ, ಈರಣ್ಣ ಪಾಟೀಲ (ರಂಭಾಪೂರ), ಕಾರ್ಯದರ್ಶಿಗಳು ಲಕ್ಕಪ್ಪ ಮಾಲಗಾರ, ರಾಜಕುಮಾರ ರಾಠೋಡ, ಬಸವರಾಜ ಗುರಣ್ಣವರ, ಬಸನಗೌಡ ಬಿರಾದಾರ, ಸಂತೋಷ ತೆಲಸಂಗ, ಕೋಶಾಧ್ಯಕ್ಷರು ಮಹೇಶ ಹಿಕ್ಕನಗುತ್ತಿ ಅವರನ್ನು ನೇಮಕ ಮಾಡಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಲ್ಪಸಂಖ್ಯಾತ ವಸತಿ ನಿಲಯ ಪ್ರವೇಶ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಮುಸ್ಲಿಂ ವಸತಿ (ಆಂಗ್ಲ ಮಾಧ್ಯಮ) ಶಾಲೆ ಹಾಗೂ ಡಾ.ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆಗಳ 2024–25ನೇ ಸಾಲಿನ ಶೈಕ್ಷಣಿಕ ವರ್ಷದ 6ನೇ ತರಗತಿ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ಮಾ.31 ರವರೆಗೆ ವಿಸ್ತರಿಸಲಾಗಿದೆ.

ಅರ್ಜಿಯನ್ನು ಸೇವಾ ಸಿಂಧು ಪೋರ್ಟಲ್ website:https://sevasindhuservices.Karnataka.gov.in ಮೂಲಕ ನೇರವಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಅಲ್ಪಸಂಖ್ಯಾತ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ವಿದ್ಯಾರ್ಥಿಗಳಿಗೆ ಶೇ.75ರಷ್ಟು ಹಾಗೂ ಇತರೆ ವರ್ಗದ ವಿದ್ಯಾರ್ಥಿಗಳಿಗೆ ಶೇ.25ರಷ್ಟು ಮೆರಿಟ್ ಅಥ–ವಾ ಪ್ರವೇಶ ಪರೀಕ್ಷೆ ಮೂಲಕ ಆಯ್ಕೆ ಮಾಡಲಾಗುವುದು. ವಸತಿ ಶಾಲೆಗಳಲ್ಲಿ ಶೇ.50ರಷ್ಟು ಹೆಣ್ಣು ಮಕ್ಕಳಿಗಾಗಿ ಮೀಸಲಿರಿಸಿದೆ. ಆಯ್ಕೆಯಾದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಆಂಗ್ಲ ಮಾಧ್ಯಮ ಶಿಕ್ಷಣ, ಉಚಿತ ಸಮವಸ್ತ್ರ, ಪಠ್ಯಪುಸ್ತಕ, ನೋಟ್‌ಬುಕ್, ಲೇಖನಿ ಸಾಮಗ್ರಿಗಳು, ಸ್ಕೂಲ್ ಬ್ಯಾಗ್ ಹಾಗೂ ಊಟ ವಸತಿ ಸೌಲಭ್ಯ ಕಲ್ಪಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಅಧಿಕಾರಿಗಳ ಕಚೇರಿ, ಮೌಲಾನಾ ಆಝಾದ್ ಭವನ, ಜಿಲ್ಲಾ ಪಂಚಾಯತ್, ರಸ್ತೆ, ಕನಕದಾಸ ಬಡಾವಣೆ, ವಿಜಯಪುರ ದೂ: 08352–295523, ತಾಲೂಕಾ ವಿಸ್ತರಣಾಧಿಕಾರಿ ವಿಜಯಪುರ ಮೊ: 9448986236, ಇಂಡಿ ತಾಲೂಕಾ ವಿಸ್ತರಣಾಧಿಕಾರಿ ಮೊ: 9900229780, ಪ್ರಾಂಶುಪಾಲರು, ಡಾ.ಎಪಿಜೆ ಅಬ್ದುಲ್ ಕಲಾಂ ಬಾಲಕಿಯರ ವಸತಿ ಶಾಲೆ ಅರಕೇರಿ ಮೊ: 8971459683, ಸಿಂದಗಿ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮೊ: 9980952960 ಹಾಗೂ ಚಡಚಣ ಮೊರಾರ್ಜಿ ಶಾಲೆಯ ಪ್ರಾಂಶುಪಾಲ ಮೊ: 9620828185, ಸರ್ಕಾರಿ ಮುಸ್ಲಿಂ ವಸತಿ ಶಾಲೆ ಅಫಜಲಪುರ ಟಕ್ಕೆ ಪ್ರಾಂಶುಪಾಲ ಮೊ: 8310830407, ಮುದ್ದೇಬಿಹಾಳ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಪ್ರಾಂಶುಪಾಲ ಮೊ: 9844493306, ಇಂಡಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಪ್ರಾಂಶುಪಾಲ ಮೊ: 9632454670, ಮುದ್ದೇಬಿಹಾಳ ನಂ2ರ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಪ್ರಾಂಶುಪಾಲ ಮೊ: 7259179398 ಸಂಖ್ಯೆಗೆ ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

# ಕಿಡ್ನಿ: ಮಾ.20ವರೆಗೆ ಉಚಿತ ತಪಾಸಣೆ & ಚಿಕಿತ್ಸಾ ಶಿಬಿರ

**ಉದಯರಶ್ಮಿ ನ್ಯೂಸ್**

ವಿಜಯಪುರ: ಬಿ.ಎಲ್.ಡಿ.ಇ ಸಂಸ್ಥೆಯ ಎ.ವಿ.ಎಸ್. ಆಯುರ್ವೇದ ಮಹಾವಿದ್ಯಾಲಯಲ್ಲಿ ಕಿಡ್ನಿ ವೈಪಲ್ಯ ಮತ್ತು ಕಿಡ್ನಿ ಸಂಬಂದಿತ ಸಮಸ್ಯೆಗಳು ಕುರಿತು ಉಚಿತ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ ಪ್ರಾರಂಭವಾಗಿದ್ದು ಮಾ. 20ರ ವರೆಗೆ ನಡೆಯಲಿದೆ.

ಮೂತ್ರ ಕಡಿಮೆ ವಿಸರ್ಜನೆ, ರಕ್ತ ಹೀನತೆ, ರಕ್ತ ಒತ್ತಡ(ಹೈ ಬಿಪಿ), ಧಿರ್ಘ ಕಾಲಿನ ಕಿಡ್ನಿ ವೈಫಲ್ಯ , ಹೈ ಕ್ರೀಯಾಟಿನಿನ್ ಲೆವೆಲ್ಸ, ವಾಂತಿ, ಪಾದ ಉಜ್ಜುವಿಕೆ, ಸಕ್ಕರೆ ಕಾಯಿಲೆಯಿಂದ ಕಿಡ್ನಿ ವೈಪಲ್ಯ , ಈ ರೀತಿಯ ಲಕ್ಷಣಗಳು, ತೊಂದರೆಗಳು ಹೊಂದಿರುವವರು ಶಿಬಿರದಲ್ಲಿ ತಪಾಸಣೆ ಮತ್ತು ಉಚಿತ ಚಿಕಿತ್ಸೆಯ ಸದುಪಯೊಗ ಪಡೆದುಕೊಳ್ಳಬೇಕೆಂದು ಕಾಲೇಜಿನ ಪ್ರಾಚಾರ್ಯ ಡಾ. ಸಂ–ಜಯ ಕಡ್ಲಿಮಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಸರು ನೊಂದಾಯಿಸಲು ಮತ್ತು ಹೆಚ್ಚಿನ ಮಾಹಿತಿಗಾಗಿ ಮೋಬೈಲ್.ನಂ.7406737888 7483278348, ಸಂಪರ್ಕಿಸಬಹುದಾಗಿದೆ.

# ಎಸ್ಸೆಸ್ಸೆಲ್ಸಿ ಪರೀಕ್ಷೆ ಸುಸೂತ್ರವಾಗಿ ನಡೆಸಿ :ಡಿಸಿ ಟಿ.ಭೂಬಾಲನ್

**ಉದಯರಶ್ಮಿ ನ್ಯೂಸ್**



ವಿಜಯಪುರ: ಇದೇ ಮಾ. 25ರಿಂದ ಏ.6 ರವರೆಗೆ ಎಸ್–ಎಸ್‌ಎಲ್ ಸಿ ಪರೀಕ್ಷೆಗಳು ನಡೆಯಲಿದ್ದು, ವ್ಯವಸ್ಥಿತ ಹಾಗೂ ಸೂಸೂತ್ರವಾಗಿ ಪರೀಕ್ಷೆ ನಡೆಸುವಂತೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚಿಸಿದರು.

ಸೋಮವಾರ ನಗರದ ಕಂದಗಲ್ ಹಣಮಂತರಾಯ ರಂಗಮಂದಿರದಲ್ಲಿ ನಡೆದ ಎಸ್‌ಎಸ್ ಎಲ್ ಸಿ ಪರೀಕ್ಷಾ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು

ಜಿಲ್ಲೆಯಲ್ಲಿ 127 ಪರೀಕ್ಷಾ ಕೇಂದ್ರಗಳನ್ನು ತೆರೆಯಲಾಗಿದ್ದು, ಒಟ್ಟು 41,749 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದರು.

ಪರೀಕ್ಷಾ ಕೇಂದ್ರಗಳಲ್ಲಿ ಸಿಸಿ ಕ್ಯಾಮರಾಗಳನ್ನು ಕಡ್ಡಾಯವಾಗಿ ಅಳವಡಿಸುವ ಕಾರ್ಯವಾಗಬೇಕು. ಪರೀಕ್ಷೆಯ ವೇಳೆ ಯಾವ ಲೋಪವಾಗದಂತೆ ಹಾಗೂ ಪಾರದರ್ಶಕತೆ ಕಾಪಾಡುವ ನಿಟ್ಟಿನಲ್ಲಿ ಜಿಲ್ಲಾ ಹಂತದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳನ್ನೊಳಗೊಂಡ 8 ಜಿಲ್ಲಾ ಮಟ್ಟದ ಜಾಗೃತದಳ, ತಾಲೂಕು ಮಟ್ಟದಲ್ಲಿ ಪ್ರತಿ ತಾಲೂಕಿಗೂ 3 ಜಾಗೃತದಳ ತಂಡಗಳನ್ನು ರಚಿಸಲಾಗಿದೆ ಎಂದು ಹೇಳಿದರು.

ಪರೀಕ್ಷಾ ಕರ್ತವ್ಯಕ್ಕೆ ನಿಯೋಜನೆಗೊಂಡಿರುವ ಯಾವುದೇ ಅಧಿಕಾರಿ ಅಥವಾ. ಸಿಬ್ಬಂದಿ ಮೊಬೈಲ್ ಪೋನ್ ತರುವುದನ್ನು ಹಾಗೂ ಬಳಸುವುದನ್ನು ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಸಮೀಪದಲ್ಲಿರುವ ಝರಾಕ್ಸ್ ಅಂಗಡಿಗಳು, ಕಂಪ್ಯೂಟ–ರ್ ಸೆಂಟರ, ಸೈಬರ್ ಕೆಫೆಗಳು, ಕೋಚಿಂಗ್ ಕೇಂದ್ರಗಳು ಪರೀಕ್ಷೆ ಅವಧಿಯಲ್ಲಿ ತೆಗೆಯಬಾರದು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ರಿಶಿ ಆನಂದ ಮಾತನಾಡಿ, ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಕುಡಿಯುವ ನೀರು, ವಿದ್ಯುತ್ ಸೌಕರ್ಯ, ಶೌಚಾಲಯ ಸೇರಿದಂತೆ ಅಗತ್ಯ ಮೂಲಭೂತ ಸೌಲಭ್ಯಗಳ ಇರುವ ಕುರಿತು ಮುಂಚಿತವಾಗಿ ಪರಿಶೀಲನೆ ಮಾಡಬೇಕು. ಪರೀಕ್ಷಾ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಯಾವುದೇ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಈ ವೇಳೆ ವೇದಿಕೆಯಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಎನ್ ಹೆಚ್ ನಾಗೂರ, ಇಂಡಿ ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ, ವಿಜಯಪುರ ಡೈಯಟ್ ಸಂಸ್ಥೆಯ ಪ್ರಾಚಾರ್ಯರಾದ ಉಮಾದೇವಿ ಸೊನ್ನದ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ರಾಮನಗೌಡ ಹಟ್ಟಿ, ಪ್ರಾಚಾರ್ಯ ಜಗದೀಶ್ ಇದ್ದರು.

# ಮಾ.21ರಂದು ವಿದ್ಯುತ್ ವ್ಯತ್ಯಯ

**ಉದಯರಶ್ಮಿ ನ್ಯೂಸ್**

ವಿಜಯಪುರ: ಇಂಡಿ ವಿಭಾಗದ 33/11 ಕೆವಿ ತಾಂಬಾ ಉಪಕೇಂದ್ರದಲ್ಲಿ ಸಿಟಿ ಬದಲಾವಣೆಯ ತುರ್ತು ನಿರ್ವಹಣೆ ಕಾಮಗಾರಿ ನಡೆಯುತ್ತಿರುವುದರಿಂದ ಮಾ.21 ರಂದು ಬೆಳಗ್ಗೆ 10ರಿಂದ ಸಂಜೆ 5 ಘಂಟೆಯ ವರೆಗೂ 33/11 ಕೆವಿ ತಾಂಬಾ ಉಪಕೇಂದ್ರದಿಂದ ಹೊರಡುವ 11 ಕೆವಿ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಆದ ಕಾರಣ ಸದರಿ ಮಾರ್ಗಗಳಲ್ಲಿ ಬರುವ ಸಾರ್ವಜನಿಕರು, ಗ್ರಾಹಕರು ಸಹಕರಿಸಬೇಕು ಎಂದು ಇಂಡಿ ಕಾರ್ಯ ನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಿಂದಗಿಯ ಬ್ರಹ್ಮಾಕುಮಾರಿ ಈಶ್ವರಿ ವಿಶ್ವವಿದ್ಯಾಲಯದಲ್ಲಿ ಕವಿಗೋಷ್ಠಿ & ಕಾವ್ಯ ಕುಂಚ ಕಾರ್ಯಕ್ರಮ

# ಕಾವ್ಯ ಸಂಸಾರಕ್ಕೆ ಕವಿಯೇ ಬ್ರಹ್ಮ :ಬಿರಾದಾರ

**ಉದಯರಶ್ಮಿ ನ್ಯೂಸ್**



ವಿಜಯಪುರ: ಕಾವ್ಯ ಸಂಸಾರಕ್ಕೆ ಕವಿಯೇ ಬ್ರಹ್ಮ. ಅವನಿಗೆ ರುಚಿಸುವಂತೆ ಇಡೀ ವಿಶ್ವವನ್ನೇ ಬದಲಿಸುವವನೇ ಕವಿ ಎಂದು ಆದ–ರ್ಶ ವಿದ್ಯಾಲಯದ ಪ್ರಾಚಾರ್ಯ ಶಿವಪ್ಪಗೌಡ ಬಿರಾದಾರ ಹೇಳಿದರು.

ಸಿಂದಗಿಯ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ 88ನೇ ತ್ರಿಮೂರ್ತಿ ಶಿವ ಜಯಂತಿ ಹಾಗೂ ಮಹಾಶಿವರಾತ್ರಿ ಪ್ರಯುಕ್ತ ಹಮ್ಮಿಕೊಂಡ ಶಿವಸ್ಮೃತಿ ಕವಿಗೋಷ್ಠಿ ಹಾಗೂ ಕಾವ್ಯ ಕುಂಚ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಾವ್ಯ ಹುಟ್ಟಲು ಮುಖ್ಯ ಕಾರಣ ಪ್ರತಿಭೆ, ಇದೇ ಕಾವ್ಯದ ಬೀಜ. ಕಾವ್ಯ ಗಂಗೋತ್ರಿ ಇದು ಕವಿಯಲ್ಲಿರುವ ವಿಶಿಷ್ಟ ಶಕ್ತಿ, ಹೊಳಪು ತೇಜಸ್ಸುಮಯವಾಗಿದೆ ಎಂದರು.

ಕಾವ್ಯವು ಸತತ ಅಧ್ಯಯನದ ಮೂಲಕ ರಚನೆಯಾಗುತ್ತದೆ. ಆಗ ಕವಿಯು ಚೇತನವನ್ನು ಅಚೇತನವನ್ನಾಗಿ, ಅಚೇತನವನ್ನು ಸಚೇತನವನ್ನಾಗಿ ಮಾಡಬಲ್ಲ ಕವಿಗೆ ವರ್ತಮಾನ, ಭೂತ, ಭವಿಷತ್ತನ್ನು ತೋರುವ ಸಾಮರ್ಥ್ಯವಿರಬೇಕು ಎಂದರು.

ಅತಿಥಿಯಾಗಿ ಎಚ್ ಜಿ ಕಾಲೇಜಿನ ಉಪನ್ಯಾಸಕ ಸಿದ್ದಲಿಂಗ ಕಿಣಗಿ ಮಾತನಾಡಿದರು.

ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಸಂಚಾಲಕಿ ಪವಿತ್ರಾಜಿ ಸಾನಿಧ್ಯ ವಹಿಸಿದ್ದರು

ಈ ಸಂದರ್ಭದಲ್ಲಿ ನಡೆದ ಕಾವ್ಯ ಕುಂಚ ಕಾರ್ಯಕ್ರಮದಲ್ಲಿ ಗುಂಡಣ್ಣ ಕುಂಬಾರ, ಕಾವ್ಯ ನಾಯ್ಕ, ಎಮ್ ಬಿ ಅಲ್ದಿ, ಪ್ರಕಾಶ ಮೂಡಲಗಿ, ಮೀನಾಕ್ಷಿ ವಾಗ್ಮೊರೆ, ಡಾ. ಪ್ರಶಾಂತ ಬಮ್ಮಣ್ಣಿ, ಎಸ್ ಸಿ ಬಿರಾದಾರ, ಮಹಾಂತೇಶ ನಾಗೋಜಿ, ಶ್ರದ್ಧಾನಂದ ಬಡಿಗೇರ, ಪ್ರಹ್ಲಾದ ಜಿಕೆ ಭಾಗವಹಿಸಿದ್ದರು.

20 ಕ್ಕೂ ಹೆಚ್ಚು ಕವಿಗಳು ಕವನ ವಾಚನ ಮಾಡಿದರು

ಮನಗೂಳಿ ಕಾಲೇಜಿನ ಪ್ರಾಚಾರ್ಯ ಡಾ ಬಿ ಜಿ ಪಾಟೀಲ ಸ್ವಾಗತಿಸಿ ಪ್ರಸ್ತಾವಿಕರಿಸಿದರು

ಈ ಸಂದರ್ಭದಲ್ಲಿ ಬ್ರಹ್ಮಾಕುಮಾರ ಕೆಂಪೇಗೌಡ, ವಿಜಯಕುಮಾರ ತೇಲಿ, ತಾನಾಜಿ ಕನಸೆ, ಎಸ್ ಎಸ್ ಬುಳ್ಳಾ, ಎಸ್ ವೈ ಬಿರಾದಾರ, ಶಿಕ್ಷಕ ಸಿದ್ದಲಿಂಗ ಚೌದರಿ, ಸೀಮಾ, ಕೆ ಎಸ್ ಪತ್ತಾರ, ಎಸ್ ಎಸ್ ಪಾಟೀಲ, ಪರಿಮಳಾ ಪಾಟೀಲ ಐಶ್ವರ್ಯ, ಮೇಘಾ,ಶಿಕ್ಷಕಿ ಪ್ರೇಮಾ ನಾಯಕ, ಶಿವನಗೌಡ ಬಿರಾದಾರ ಸೇರಿದಂತೆ ಮತ್ತಿತ–ರಿದ್ದರು.

ಕುಮಾರಿ ಕಾವ್ಯ ನಾಯಕ, ಡಾ ಪ್ರಕಾಶ ರಾಗರಂಜನಿ ಪ್ರಾರ್ಥಿಸಿದರು.

# ಸರ್ವಾಧ್ಯಕ್ಷ ಡಾ.ವ್ಹಿ ಡಿ ಐಹೊಳ್ಳಿ ಅವರಿಗೆ ಸನ್ಮಾನ

**ಉದಯರಶ್ಮಿ ನ್ಯೂಸ್**



ವಿಜಯಪುರ: ನಮ್ಮ ಜಿಲ್ಲೆಯ ಹೆಸರಾಂತ ಸಾಹಿತಿಗಳಾದ ಡಾ.ವ್ಹಿ ಡಿ ಐಹೊಳ್ಳಿ ಅವರು ನಾಡಿನ ಸಾಹಿತ್ಯ ಲೋಕಕ್ಕೆ ತಮ್ಮದೇ ಆದ ಕೊಡುಗೆ ನೀಡುವ ಮೂಲಕ ನಮ್ಮ ನಾಡು, ಭಾಷೆಯ ಕೀರ್ತಿಯನ್ನು ಎಲ್ಲೆಡೆ ಪಸರಿಸುವಂತೆ ಮಾಡಿದ್ದಾರೆ. ನಮ್ಮ ಭಾಷೆಯ ಶ್ರೀಮಂತಿಕೆ ಹೆಚ್ಚಲು ಅವರ ಸಾಹಿತ್ಯಿಕ ಕೊಡುಗೆ ಅಪಾರವಾಗಿದೆ ಎಂದು ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಯುವ ಘಟಕದ ಅಧ್ಯಕ್ಷ ಅಮರೇಶ ಸಾಲಕ್ಕಿ ಹೇಳಿದರು.

ಅವರು ಡಾ.ವ್ಹಿ ಡಿ ಐಹೊಳ್ಳಿ ಅವರ ಮನೆಯಲ್ಲಿ ಹಮ್ಮಿಕೊಂಡ ಸನ್ಮಾನ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಯುವ ಘಟಕದ ಗೌರವ ಸಲಹೆಗಾರ ಸಂತೋಷ ಬಂಡೆ ಮಾತನಾಡಿ, ಅನೇಕ ಕೃತಿಗಳನ್ನು ಸಂಪಾದಿಸಿ,ರಚಿಸಿದ ಅನುಭವ ಡಾ.ಐಹೊಳ್ಳಿ ಅವರದು. ಶರಣ ಸಾಹಿತ್ಯ, ಕಥೆ, ಕಾವ್ಯಗಳನ್ನು ಕೂಡ ರಚಿಸಿದ ಅವರು ಪ್ರಸ್ತುತ ವಚನಪಿತಾಮಹ ಡಾ. ಫ.ಗು ಹಳಕಟ್ಟಿ ಸಂಶೋಧನಾ ಕೇಂದ್ರದ ಸಹ ಸಂಯೋಜಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಅವರನ್ನು 19ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದು, ನಮಗೆಲ್ಲ ಸಂತಸ ತಂದಿದೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ವಿಜಯಪುರ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಯುವ ಘಟಕದ ವತಿಯಿಂದ ಅಧ್ಯಕ್ಷ ಅಮರೇಶ ಸಾಲಕ್ಕಿ, ಗೌರವ ಸಲಹೆಗಾರ ಸಂತೋಷ ಬಂಡೆ ಅವರು ಡಾ.ಐಹೊಳ್ಳಿ ಅವರನ್ನು ಸನ್ಮಾನಿಸಿ ಅಭಿನಂದಿಸಿದರು.

### ಬಬಲೇಶ್ವರ ಶಾಖಾ ಕಾಲುವೆಯ 1 ಹಾಗೂ 2ರ ವಿತರಣಾ ಕಾಲುವೆಗಳ ನಿರ್ಮಾಣ ಕಾಮಗಾರಿಯ ಭೂಮಿ ಪೂಜೆ

# ನೀರಿನ ಸದ್ಬಳಕೆಯಾಗಲಿ :ಸಚಿವ ಶಿವಾನಂದ ಪಾಟೀಲ

**ಉದಯರಶ್ಮಿ ನ್ಯೂಸ್**



ಕೊಲ್ಹಾರ: ಬಸವನ ಬಾಗೇವಾಡಿ ಮತಕ್ಷೇತ್ರದ ಹಾಗೂ ಅವಳಿ ಜಿಲ್ಲೆಯ ಕೃಷಿ ಚಟುವಟಿಕೆಯನ್ನು ಮಾಡುವ ರೈತಾಪಿ ವರ್ಗದವರು ನೀರಿನ ಮಹತ್ವವನ್ನು ಅರಿತು ಯಥೇಚ್ಚವಾಗಿ ಬಳಸದೇ ಸದ್ವಿನಿಯೋಗದ ಮೂಲಕ ಯಾವುದೇ ಮೂಲಗಳಿಂದ ಹರಿದು ಬರುವ ನೀರನ್ನು ಸದುಪಯೋಗ ಪಡಿಸಿಕೊಳ್ಳಲು ಮುಂದಾಗಬೇಕು ಎಂದು ರೈತರಿಗೆ ಸಚಿವ ಶಿವಾನಂದ ಎಸ್ ಪಾಟೀಲ ಕರೆಕೊಟ್ಟರು.

ತಾಲೂಕಿನ ಮುಳವಾಡ ಗ್ರಾಮದಲ್ಲಿ ಕೃಷ್ಣಾ ಭಾಗ್ಯ ಜಲನಿಗಮದ ಮುಳವಾಡ ಏತ ನೀರಾವರಿ ಹಂತ–3 ರ ಅಡಿಯಲ್ಲಿ ಬಬಲೇಶ್ವರ ಶಾಖಾ ಕಾಲುವೆಯ 1 ಹಾಗೂ 2ರ ಮೂಲಕ 1704.12 ಹೆಕ್ಟರ್ ಭೂಪ್ರದೇಶ ನೀರಾವರಿ ಕ್ಷೇತ್ರವಾಗಲು ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ವಿತರಣಾ ಕಾಲುವೆಗಳ ನಿರ್ಮಾಣ ಕಾಮಗಾರಿಯ ಭೂಮಿ ಪೂಜಾ ಸಮಾರಂಭವನ್ನು ಶುಕ್ರವಾರ ಸಾಯಂಕಾಲ ನೆರವೇರಿಸಿ ಮಾತನಾಡುತ್ತಿದ್ದರು.

ಪ್ರತಿ ಮೂರು ವರ್ಷದ ನಂತರ ಬರಗಾಲ ಬರುವದು ನೈಸರ್ಗಿಕವಾದ ಸಹಜ ವಾತಾವರಣವಾಗಿದ್ದು ಬರಗಾಲದಂಥಹ ಇಂಥಹ ಪರಿಸ್ಥಿತಿಯಲ್ಲೂ ರೈತರ ಬದುಕು ದುಸ್ತರವಾದರೂ ಬದುಕುವದು ಅನಿವಾರ್ಯವಾಗಿದೆ ಆದ್ದರಿಂದ ರೈತಾಪಿ ವರ್ಗದವರು ಎದೆಗುಂದದೆ ಕೃಷಿ ಚಟುವಟಿಕೆಗಳಲ್ಲಿ ಇರುವ ನೀರನ್ನು ಸದ್ಬಳಕೆಮಾಡಿಕೊಂಡು ಭೂಮಿ ತಾಯಿಯನ್ನು ಸಂತೃಪ್ತಿಗೊಳಿಸುವದರ ಜೊತೆಗೆ ದನ ಕರುಗಳಿಗೂ ಅವಲಂಬಿತ ಕುಟುಂಬ ವರ್ಗದ ಜೀವನೋಪಾಯಕ್ಕಾಗಿ ಆಸರೆಯಾಗುವ ಕರ್ತವ್ಯ ರೈತನದಾಗಿದೆ ಎಂದರು.

ದಿ॥ ಮಾಜಿ ಮುಖ್ಯಮಂತ್ರಿ ಜೆ.ಎಚ್.ಪಟೇಲ ಅವರನ್ನು ನಾವು ನೆನೆಯಲೇಬೇಕು ಕಾರಣ ಆಲಮಟ್ಟಿ ಆಣೆಕಟ್ಟನ್ನು 524 ಮೀ ಎತ್ತರಿಸಿ ಗೇಟಗಳನ್ನು ಅಳವಡಿಸಿ ಅನುಕೂಲ ಮಾಡಿರುವದನ್ನು ಆಂದ್ರಪ್ರದೇಶ ಸರಕಾರ ಸುಪ್ರೀಂಕೋರ್ಟನಿಂದ ತಡೆಯಾಜ್ಞೆ ತಂದು 519.6 ರ ವರೆಗೆ ಗೇಟ್ ಅಳವಡಿಸಕೊಳ್ಳಲು ಸೂಚಣೆ ಕೊಟ್ಟ ಪ್ರಕಾರ ಈ ಭಾಗದ ರೈತರಿಗೆ ಅನುಕೂಲವಾಗುವ ನೀರು 300 ಟಿ.ಎಂ.ಸಿ ಅಷ್ಟು ವ್ಯರ್ಥವಾಗಿ ಸಮುದ್ರದ ಪಾಲಾಗುತ್ತಿದೆ ಅಲ್ಲದೇ ನ್ಯಾಯಾಲಯಗಳು ರಾಜ್ಯರಾಜ್ಯಗಳ ಮಧ್ಯದ ನೀರಿನ ನ್ಯಾಯವನ್ನು ತ್ವ–ರಿತವಾಗಿ ಬಗೆಹರಿಸದೇ ಇರುವದು ಈ ನಾಡಿನ ಜನರ ದೌರ್ಭಾಗ್ಯ ಎನ್ನುವಂತಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು.

ನಾಗರದಿನ್ನಿ ಸದಾನಂದ ಆಶ್ರಮದ ಮಲ್ಲಿಕಾರ್ಜುನ ಶ್ರೀಗಳು ಸಾನಿಧ್ಯವಹಿಸಿದ್ದರು ಅಧ್ಯಕ್ಷತೆಯನ್ನು , ಮುಳವಾಡ ಗ್ರಾಮ ಪಂಚಾಯತಿ ಅಧ್ಯಕ್ಷ ಹಣಮಂತ ಕಳಸಗೊಂಡ ವಹಿಸಿದ್ದರು, ಅತಿಥಿಗಳಾಗಿ ಚಂದ್ರಶೇಖರಗೌಡ ಪಾಟೀಲ, ಎಸ್.ಆರ್.ಪಾಟೀಲ, ಚನ್ನಪ್ಪಗೌಡ ಬಿರಾದಾರ, ಶಿವಪ್ಪ ಗಾಯಕವಾಡ, ಶೇಖಪ್ಪ ಬೀಳಗಿ, ಅಶೋಕ ಕಳಸಗೊಂಡ, ಸುತ್ತಮುತ್ತಲಿನ ಗ್ರಾಮಗಳ ಗಣ್ಯರು ಹಾಗೂ ಯುವಕರಾದ ರವಿ ಕೆಂಗನಾಳ, ಅಣ್ಣುಗೌಡ ಬಿರಾದಾರ, ಬಸವರಾಜ ಸಿದ್ದಾಪೂರ ಪ್ರಮುಖರು ಭಾಗವಹಿಸಿದ್ದರು.

# ಕಾಂಗ್ರೆಸ್ ಪ್ರ.ಕಾರ್ಯದರ್ಶಿಯಾಗಿ ಸನ್ನಿ ಗವಿಮಠ ನೇಮಕ

**ಉದಯರಶ್ಮಿ ನ್ಯೂಸ್**

ವಿಜಯಪುರ: ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯು ವಿಜಯಪುರ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ಸನ್ನಿ ಗವಿಮಠ (ತ್ರಿಲೋಚನ) ಅವರನ್ನು ಆಯ್ಕೆ ಮಾಡಿ ಪಕ್ಷದ ಜಿಲ್ಲಾಧ್ಯಕ್ಷ ಎಚ್.ಆರ್.ಆಲಗೂರ (ರಾಜು) ಆದೇಶ ಹೊರಡಿಸಿದ್ದಾರೆ.

ಪಕ್ಷದ ಮುಖಂಡರ ಮಾರ್ಗದರ್ಶನದಲ್ಲಿ ಹಾಗೂ ಸ್ಥಳೀಯ ನಾಯಕರ ಸಹಕಾರದೊಂದಿಗೆ ತಮ್ಮ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಿ ಪಕ್ಷದ ಸಂಘಟನೆಗೆ ಶ್ರಮಿಸುವಂತೆ ಆದೇಶ ಪತ್ರದಲ್ಲಿ ಗವಿಮಠ ಅವರಿಗೆ ಸೂಚಿಸಲಾಗಿದೆ.



# ಮಕ್ಕಳ ಬದುಕನ್ನು ಹಸನಾಗಿಸಲು ಶ್ರಮಿಸಿ :ಗಣಿ

**ಉದಯರಶ್ಮಿ ನ್ಯೂಸ್**



ಕೊಲ್ಹಾರ: ಶಾಲಾ ಶೈಕ್ಷಣಿಕ ಪಠ್ಯಪುಸ್ತಕಗಳ ಓದು ಬರಹದ ಜೊತೆಗೆ ಶಾಲೆಯಲ್ಲಿ ಶಿಕ್ಷಕರು ಮನೆಯಲ್ಲಿ ಪಾಲಕರು ಮಕ್ಕಳಿಗೆ ಉತ್ತಮ ಸಂಸ್ಕಾರ ಕಲಿಸಕೊಡುವದು ಇಂದಿನ ದಿನಮಾನಗಳಲ್ಲಿ ಅತ್ಯವಶ್ಯಕವಾಗಿದೆ ಎಂದು ಸಮಾಜಸೇವಕ ಹಾಗೂ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಕಾರ್ಯಕಾರಣಿ ಸದಸ್ಯ ಪರಶುರಾಮ ಬ ಗಣಿ ಹೇಳಿದರು.

ಗರಸಂಗಿ ರಸ್ತೆಗೆ ಹೊಂದಿಕೊಂಡಿರುವ ಪಟ್ಟಣದ ಬಸವೇಶ್ವರ ಪ್ರಾಥಮಿಕ ಶಾಲಾ ಆವರಣದಲ್ಲಿ ನಡೆದ ಬಹುಮಾನ ವಿತರಣಾ, ಸನ್ಮಾನ, ಹಾಗೂ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಅವರು ಮಾತನಾಡುತ್ತಿದ್ದರು.

ಪಾಲಕರಾದ ನಾವುಗಳು ಇಂದಿನ ಮಕ್ಕಳಿಗೆ ಕಷ್ಟಕರವಾದ ಜೀವನ ಪದ್ಧತಿಯ ಬದಲಾಗಿ ಆಧು–ನಿಕ ವ್ಯಾಮೋಹಗಳ ಸಾಮಾಜಿ–ಕ ಜಾಲತಾನದ ಅನುಕರಣೀಯ ವ್ಯಸನದ ಕಡೆ ವಾಲಿಸುತ್ತಿರುವದು ಮುಂದೊಂದು ದಿನ ಸಮಾಜದಲ್ಲಿ ಅವರ ಬದುಕು ದುಸ್ತರವಾಗಬಹುದು. ಆದ್ದರಿಂದ ನಾವುಗಳು ಮಕ್ಕಳ ಬದುಕನ್ನು ಹಸನಾಗಿಸಲು ಶ್ರಮಿಸಬೇಕು ಎಂದರು.

ನಿವೃತ್ತ ಮುಖ್ಯಗುರು ಕೆ.ಯು. ಗಿಡ್ಡಪ್ಪಗೋಳ ಮಾತನಾಡಿ, ಆಧು–ನಿಕ ಶೈಲಿಯ ಶಿಕ್ಷಣ ಪದ್ಧತಿಯನ್ನು ಕಲಿಯುವದರ ಜೊತೆಗೆ ಮಕ್ಕಳು ಹಿಂದಿನ ಹಿರಿಯರು ಹಾಕಿಕೊಟ್ಟ ಸನ್ಮಾರ್ಗದ ದಾರಿಯನ್ನು ನೆನೆಯುತ್ತಾ ಗುರುವಿನ ಅನುಯಾಯಿಗಳಾಗಿ ಶೃದ್ದೆ ನಿಷ್ಠೆಯಿಂದ ಕಲಿಕೆಯಲ್ಲಿ ಕಠಿಣ ಪರಿಶ್ರಮವಂತರಾದಾಗ ಅಕ್ಷರವಂತರಾಗಿ ಸಮಾಜದಲ್ಲಿ ತಲೆಎತ್ತಿ ನಿಲ್ಲುವಂತಾಗುತ್ತದೆ ಈ ದಿಸೆಯಲ್ಲಿ ವಿಧ್ಯಾರ್ಥಿಗಳು ಗಮನಹರಿಸಬೇಕು ಎಂದು ಕರೆಕೊಟ್ಟರು.

ಗರಸಂಗಿ ಗ್ರಾಮದ ಶಾಲಾ ಶಿಕ್ಷಕ ಪರಶುರಾಮ ವಾಲಗದ ಅವರನ್ನು ಇದೇ ಸಂದರ್ಬದಲ್ಲಿ ಸನ್ಮಾನಿಸಲಾಯಿತು, ವಿವಿಧ ಸ್ಪರ್ದೆಗಳಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನ ವಿತರಣೆ, ಶಾಲೆಯ 17ನೇ ವಾರ್ಷಿಕ ಉತ್ಸವ ಜರುಗಿತು.

ಅಧ್ಯಕ್ಷತೆಯನ್ನು ರಾಚಪ್ಪ ಕುಂಬಾರ ವಹಿಸಿದ್ದರು, ಅತಿಥಿಗಳಾಗಿ ಪಟ್ಟಣ ಪಂಚಾಯತ ಸದಸ್ಯೆ ಶ್ರೀಮತಿ ಆಶಾ ಬನಪ್ಪ ಬಾಲಗೊಂಡ, ಸಿದ್ದಪ್ಪ ಕಂಕಣವಾಡಿ, ಸಿದ್ದು ಮಾವಿನಭಾವಿ, ಪರಶುರಾಮ ವಾಲಗದ, ಶಾಲಾ ಶಿಕ್ಷಕ ಬಳಗದವರು ಉಪಸ್ಥಿತರಿದ್ದರು.

# ಲೋಕ್ ಅದಾಲತ್‌ಗೆ ಅಭೂತಪೂರ್ವ ಸ್ಪಂದನೆ :ನ್ಯಾ.ನಾಲವಡೆ



**ಉದಯರಶ್ಮಿ ನ್ಯೂಸ್**

ವಿಜಯಪುರ: ಕಕ್ಷಿದಾರರು ಬಹಳ ವರ್ಷ ಅಲೆದಾಡುವ ಬದಲು ಜನತಾ ನ್ಯಾಯಾಲಯದಲ್ಲಿ ರಾಜೀ ಸಂಧಾನದ ಮೂಲಕ ತಮ್ಮ ತಮ್ಮ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಂಡರೆ ಹಣ ಮತ್ತು ಸಮಯ ಎರಡೂ ಉಳಿಯುವಾದರಿಂದ ಸಾರ್ವಜನಿಕರು ಜನತಾ ನ್ಯಾಯಾಲಯದ ಸದುಪಯೋಗಪಡಿಸಿಕೊಳ್ಳಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಶಿವಾಜಿ ಅನಂತ ನಲವಡೆ ಅವರು ಕರೆ ನೀಡಿದರು.

ಮಾ.16ರಂದು ನಡೆದ ರಾಷ್ಟ್ರೀಯ ಲೋಕ ಅದಾಲತನ್ನು ನಡೆಸಿ ಅವರು ಮಾತನಾಡಿ, ಕಕ್ಷಿದಾರರು ಹಾಗೂ ವಕೀಲರ ಸಹಕಾರದಿಂದ ವಿವಿಧ ನ್ಯಾಯಾಲಯಗಳಲ್ಲಿ ವಿಚಾರಣೆಗಿದ್ದ ಹಲವಾರು ಪ್ರಕರಣಗಳ ಪೈಕಿ ಒಟ್ಟು 11,557 ಪ್ರಕರಣಗಳು ರಾಜೀ ಸಂಧಾನದ ಮೂಲಕ ಇತ್ಯರ್ಥಗೊಂಡಿವೆ. ಅವುಗಳಲ್ಲಿ ಆಸ್ತಿ ವಿಭಾಗ ಕೋರಿದ 169 ದಾವೆಗಳು, 227 ಚೆಕ್ ಬೌನ್ಸ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪರಿಹಾರ ಕೋರಿದ 125 ಪ್ರಕರಣಗಳು, ಜೀವನಾಂಶ ಕೋರಿ ಸಲ್ಲಿಸಿದ 63 ಪ್ರಕರಣಗಳು, ರಾಜಿಯಾಗಬಹುದಾದ 78 ಕ್ರಿಮಿನಲ್ ಪ್ರಕರಣಗಳು ಹಾಗೂ 518 ಅಮಲ್ಜಾರಿ ಪ್ರಕರಣಗಳು ಸೇರಿವೆ ಎಂದು ಮಾಹಿತಿ ನಿಡಿದರು.

ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಂತೋಷ್ ಎಸ್. ಕುಂದರ್ ಮಾತನಾಡಿ, ಜನತಾ ನ್ಯಾಯಾಲಯದಲ್ಲಿ ರಾಜೀ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಂಡು ಸಾರ್ವಜನಿಕರು ಶೀಘ್ರ ನ್ಯಾಯ ಪಡೆದುಕೊಂಡು ಪರಸ್ಪರ ಸೌಹಾರ್ದತೆಯಿಂದ ಸಮಾಜದಲ್ಲಿ ಜೀವನ ಸಾಗಿಸಬೇಕೆಂದು ಸಲಹೆ ನೀಡಿದರು.

ಜಿಲ್ಲಾ ನ್ಯಾಯಾಧೀಶರಾದ ರಾಮಾ ನಾಯಕ್, ಸುಭಾಷ ಸಂಕದ, ಸತೀಶ್ ಎಲ್.ಪಿ, ಮಂಜುನಾಥ ಸಂಗ್ರೇಶಿ, ಮದ್ವೇಶ ದಬೇರ್, ಸುಭಾಷ ಬಂದು ಹೊಸಕಲ್ಲೆ, ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರಾದ ಶಿವಾನಂದ ಎಮ್. ಜಿಪರೆ, ಪದ್ಮಶ್ರೀ ಎ. ಮುನ್ನೋಳಿ, ಮಲ್ಲಿಕಾರ್ಜುನ ಎ. ಅಂಬಲಿ, ಕೆ. ಉಮಾ, ಲೋಕೇಶ ಹವಳೆ, ಕಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರಾದ ವಿಶ್ವನಾಥ ಯಮಕನಮರಡಿ, ಸ್ಮಿತಾ ಎಮ್. ಮಾಲಗಾಂವೆ, ಚಂದ್ರಕಾಂತ, ಮಾದೇಶ ಎಮ್.ವಿ, ಶ್ರೀಮತಿ ಚಾಂದನಿ ಜಿ.ಯು ಹಾಗೂ ಸಂಧಾನಕಾರ ವಕೀಲರುಗಳಾದ ಮಲ್ಲಿಕಾರ್ಜುನ ಜಿ. ಭೃಂಗಿಮಠ, ಡಿ.ಬಿ.ಮಠದ, ಆರ್.ಎಸ್. ಯಳಸಂಗಿಮಠ, ವಿ.ಜಿ.ಕುಲಕರ್ಣಿ, ಜೆ.ವಿ.ಖುದಾನಪುರ, ಜಾವೀದ ಗುಡಗುಂಟಿ, ದೀಪಾ ಬಿರಾದಾರ, ಅಶೋಕ.ಹೆಚ್.ಜೈನಾಪೂರ, ಶ್ರೀಮತಿ ಜಯಶ್ರೀ ಮಠಪತಿ, ಬಿ.ಎಮ್. ಅವತಾಡೆ, ಶ್ರೀಮತಿ ಆರ್.ಕೆ ಪಾಟೀಲ್, ಜೆ.ಎಮ್.ಭೂಸಗೊಂಡ, ರಾಹುಲ್ ನಾಯಕ್, ಎಸ್.ಎಸ್. ಇನಾಮದಾರ, ಬಸವರಾಜ ಎಮ್. ಎವ್, ಬಿ.ಕೆ.ಮಠ, ಯಲ್ಲಪ್ಪ ಬಡಿಗೇರ, ಎಮ್.ಸಿ.ಲೋಗಾವಿ ಅವರುಗಳು ಸಂಧಾನಕಾರ ವಕೀಲರಾಗಿ ಪ್ರಕರಣದ ರಾಜೀ ಸಂಧಾನ ಮಾಡಿಸುವಲ್ಲಿ ಯಶಸ್ವಿಯಾದರು.

## ಆಲಮಟ್ಟಿ ಮಂಜಪ್ಪ ಹರ್ಡೇಕರ ಸ್ಮಾರಕ ಶಾಲೆ ಎಸ್ಸೆಸ್ಸೆಲ್ಸಿ ಮಕ್ಕಳ ಬೀಳ್ಕೊಡುಗೆ । ಪ್ರತಿಭಾ ಪುರಸ್ಕಾರ

# ಶ್ರಮದ ನ್ಯಾಯ ಮಾರ್ಗದಲ್ಲಿ ಬದುಕಿನ ಮೌಲ್ಯ ಕಾಣಿ :ಗೀತಾ



**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ವಿದ್ಯಾರ್ಥಿಗಳು ತಮ್ಮ ಭವಿಷ್ಯತ್ತಿನ ಬದುಕಿಗಾಗಿ ಸುಂದರ ಕನಸು ಕಾಣಬೇಕು. ಆ ಕನಸು ನನಸಿಗೆ ದಿಟ್ಟ ಸಂಕಲ್ಪ ಭಾವ ತೋರಬೇಕು. ಹಲವು ಸವಾಲುಗಳ ಮಧ್ಯೆ ಗುರಿ, ಛಲ ಸಾಕಾರಕ್ಕೆ ಮುನ್ನುಡಿ ಬರೆಯಬೇಕು.ಶ್ರಮದ ನ್ಯಾಯ ಮಾರ್ಗದಲ್ಲಿ ಜೀವನ ಮೌಲ್ಯ ಕಟ್ಟಿಕೊಳ್ಳಬೇಕು. ಅಂಥದೊಂದು ಆತ್ಮವಿಶ್ವಾಸ ಎದೆಯಲ್ಲಿ ಇದ್ದರೆ ಖಂಡಿತ ಯಶಸ್ಸು ಸಾಧ್ಯ ಎಂದು ಧಾರವಾಡ ಪೋಲಿಸ್ ಆಯುಕ್ತರ ಕಚೇರಿ ಕಾನೂನು ವಿಭಾಗದ ಸಹಾಯಕ ನಿರ್ದೇಶಕಿ ಗೀತಾ ಹೊಸಗಾಣಿಗೇರ ಹೇಳಿದರು.

ಸ್ಥಳೀಯ ಮಂಜಪ್ಪ ಹರ್ಡೇಕರ ಸ್ಮಾರಕ ಸಂಯುಕ್ತ ಪ.ಪೂ.ಕಾಲೇಜು ಪ್ರೌಢಶಾಲಾ ವಿಭಾಗದ ಎಸ್ಸೆಸ್ಸೆಲ್ಸಿ ಮಕ್ಕಳ ಬೀಳ್ಕೊಡುಗೆ,ಪ್ರತಿಭಾ ಪುರಸ್ಕಾರ ಸಮಾರಂಭದ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ಪ್ರತಿಯೊಬ್ಬರ ಜೀವನದಲ್ಲಿ ಹಲವಾರು ಸಮಸ್ಯೆಗಳಿದ್ದು ಅವುಗಳನ್ನು ನಿಮ್ಮ ಅಂತಃಶಕ್ತಿಯಿಂದ ಸಮಯೋಚಿತವಾಗಿ ನಿಭಾಯಿಸಿಕೊಳ್ಳಬೇಕು ಎಂದರು.

ಮೌಲ್ಯಯುತ ಶ್ರಮ,ಶ್ರದ್ಧೆ, ಪ್ರಾಮಾಣಿಕ ಬದ್ಧತೆ ಗುಣಗಳೇ ಸಾಧನೆಯ ಸಾಧನಗಳಾಗಿವೆ. ಮನಸ್ಸು ಧೃಡತೆಯಿಂದ ಸಾಗಿದರೆ ಫಲ ದೊರೆಯುವದು. ಯಾವುದೇ ಕಾರಣಕ್ಕೂ ಗುರಿ ಸಾಧನೆಗೆ ಯುವಕರು ಅಡ್ಡದಾರಿ ಹಿಡಿಯಬಾರದು ಎಂದರು.

ನಾನು ದೊಡ್ಡ ಅಧಿಕಾರಿಯ ಮಗಳಲ್ಲ. ಸಾಮಾನ್ಯ ಕುಟುಂಬದಿಂದ ಬಂದವಳು. ಈ ಶಾಲೆಯಲ್ಲೇ ಎಸ್ಸೆಸ್ಸೆಲ್ಸಿ ವರೆಗೆ ಕಲಿತು ಓದು, ಬರಹದಿಂದ ಮುಂದೆ ಬಂದಿರುವೆ. ಕರ್ನಾಟಕ ಗಾಂಧಿ ಮಂಜಪ್ಪ ಹರ್ಡೇಕರ ಹೆಸರಿನ ಈ ಶಾಲೆಯ ಮಹಿಮೆ

ಅಪಾರವಾಗಿದೆ. ಅಂದು ಕಷ್ಟಪಟ್ಟು ಇಷ್ಟದಿಂದ ಅಧ್ಯಯನ ಮಾಡಿದ ಪರಿಣಾಮ ನನ್ನ ಬದುಕಿನ ಪಯಣ ಇಂದು ಯಶಸ್ಸು ಕಾಣುತ್ತಿದೆ. ನನ್ನ ಅಂದಿನ ಕನಸು ಇಂದು ನನಸಾಗಿದೆ. ಮಂಜಪ್ಪ ಹರ್ಡೇಕರ ರವರ ಹಾಗೂ ತೋಂಟದ ಡಾ, ಸಿದ್ದಲಿಂಗ ಪೂಜ್ಯರ ಕೃಪೆಯಿಂದ ಈ ಶಾಲೆಯಲ್ಲಿ ಶೈಕ್ಷಣಿಕ ಶ್ರೇಷ್ಠತೆ ಪಡೆದ ಅಭಿಮಾನ ಇದೆ. ಇಲ್ಲಿ ಸಂಸ್ಕಾರಯುತ ಗುಣಮಟ್ಟದ ಶಿಕ್ಷಣ ಲಭಿಸಿದೆ. ನನ್ನ ಕನಸ್ಸಿಗೆ ಇಲ್ಲಿನ ಶಾಲೆ, ಗುರುಗಳ ಹಾಗೂ ತಂದೆ, ತಾಯಿಗಳ ಆಶೀರ್ವಾದದಿಂದ ಅಧಿಕಾರಿ ಹುದ್ದೆ ಪಡೆದಿರುವೆ. ಇಂಥದೊಂದು ಸಾಧನೆ ಖುಷಿ ತಮಗೆ ತೃಪ್ತಿ ತಂದಿದೆ. ಶಿಕ್ಷಣ ಎಂಬುದು ನಮ್ಮ ಬದುಕನ್ನು ಉನ್ನತ ಮಜಲಿಗೆ ಕೊಂಡೊಯ್ಯತ್ತದೆ. ಕಾರಣ ನಮ್ಮಲ್ಲಿ ಬದ್ಧತೆಯ ಓದು ಬಲು ಮುಖ್ಯ. ಗುರುಭಕ್ತಿ ಇದ್ದರೆ ಸಾಧನೆ ಸಾಧ್ಯ. ನೀವು ಕೂಡಾ ನೈತಿಕ ಹೊಣೆಗಾರಿಕೆ ಅರಿತು ಗುರು ಸೇವೆದೊಂದಿಗೆ ಅಧಿಕಾರಿಗಳಾಗಿ ಉನ್ನತ ಹುದ್ದೆಗಳಲ್ಲಿ ವಿರಾಜಮಾನರಾಗಿ ಎಂದು ಶಿಕ್ಷಣ ರಂಗದ ಮಹತ್ವವುಳ್ಳ ಸಾರವನ್ನು ತಮ್ಮಅನುಭವದ ಮೂಲಕ ಎಳೆಎಳೆಯಾಗಿ ಗೀತಾ ಹೊಸಗಾಣಿಗೇರ ಮಕ್ಕಳೆದುರಿಗೆ ಹಂಚಿಕೊಂಡರು.

ಮಕ್ಕಳು ಇಂದು ಓದಾಸಕ್ತಿ ಕಳೆದುಕೊಂಡರೆ ಮುಂದೆ ಭವಿಷ್ಯತ್ತಿನ ಬದುಕು ಜಟಿಲವಾಗಿ ಕಾಡಬಹುದು. ಶಿಕ್ಷಣ ಇಲ್ಲದಿದ್ದರೆ ಬದುಕೇ ನಿಷ್ಪಯೋಜಕ ಎನ್ನುವಂಥ ಕಾಲಘಟ್ಟ ಇದು. ರಚನಾತ್ಮಕ ಚಟುವಟಿಕೆಗಳ ಮೂಲಕ ಬುದ್ಧಿವಂತಿಕೆ ಹೆಚ್ಚಿಸಿಕೊಂಡು ಅಭ್ಯಾಸದಲ್ಲಿ ನಿರತರಾಗಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಶಾಲೆಗೆ ಪ್ರೊಜೆಕ್ಟರ, ಪ್ರತಿಭಾವಂತ ಮಕ್ಕಳಿಗೆ ನಗದು ಬಹುಮಾನ ವಾಗ್ದಾನ: ಇದೇ ವೇಳೆ ಗೀತಾ ಹೊಸಗಾಣಿಗೇರ ತಾವು ಕಲಿತ ಈ ಶಾಲೆಗೆ ಮಕ್ಕಳ ಶೈಕ್ಷಣಿಕ ಗುಣಮಟ್ಟದ ಅನುಕೂಲಕ್ಕೆ ಒಂದು ಪ್ರೊಜೆಕ್ಟ್ ರ ಹಾಗೂ ಪ್ರತಿ ವರ್ಷವೂ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆಗೈದು ಶಾಲೆಗೆ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಪಡೆಯುವ ಪ್ರತಿಭಾನ್ವಿತ ಮಕ್ಕಳಿಗೆ ತಲಾ ಮೂರು ಸಾವಿರ ರೂ, ಬಹುಮಾನ ಪ್ರೋತ್ಸಾಹದಾಯಕವಾಗಿ ನೀಡುವ ವಾಗ್ದಾನ ಘೋಷಿಸಿದರು. ತಾವು ಕಲಿತ ಶಾಲಾ ಅಭಿವೃದ್ಧಿಗೆ ಕೈಲಾದ ಮಟ್ಟಿಗೆ ಕೊಡುಗೆ ನೀಡುವ ಇಚ್ಛೆ ವ್ಯಕ್ತಪಡಿಸಿದರು. ಗ್ರಾಮೀಣ ಪ್ರದೇಶದಲ್ಲಿರುವ ಈ ಶಾಲೆಯು ಆರಂಭದಿಂದಲೂ ಉತ್ತಮ ಜ್ಞಾನ ಧಾರೆ ಕಲಿಕಾ ಮಕ್ಕಳಗೆ ಕರುಣಿಸುತ್ತಿದೆ. ಮಕ್ಕಳ ಬೆಳವಣಿಗೆಗೆ ಪೂರಕವಾಗಿ ಕೆಲಸ ಮಾಡುತ್ತಿದೆ. ಆ ನಿಟ್ಟಿನಲ್ಲಿ ಪರಿಣಿತ ಗುರು ಬಳಗ ಗೈಯುತ್ತಿರುವ ಮಾರ್ಗದರ್ಶನದ ಕಾರ್ಯ ಶ್ಲಾಘಿಸಿದರು.

ಶಾಲೆ ಎಂದರೆ ಒಂದು ಪವಿತ್ರ ದೇವಸ್ಥಾನ ಇದ್ದಂತೆ. ಇಲ್ಲಿ ಅಭ್ಯಸಿಸುವ ಮಕ್ಕಳು ದೇಶದ ಅಮೂಲ್ಯ ಯುವಸಂಪತ್ತು. ಇದನ್ನು ನೈತಿಕತೆಯಿಂದ ಬೆಳೆಸಬೇಕಾಗಿದೆ ಎಂದ ಅವರು, ಕಲಿಕೆಗೆ ಪೂರಕ ವಾತಾವರಣ ಇಲ್ಲಿದೆ. ಮಕ್ಕಳು ಬಳಸಿಕೊಂಡು ಶೈಕ್ಷಣಿಕ ಪ್ರಗತಿದತ್ತ ಹೆಜ್ಜೆ ಹಾಕಲಿ. ತಾವು ನೀಡುವ ಪ್ರೊಜೆಕ್ಟ್ ರ ವ್ಯವಸ್ಥೆಯ ಸದುಪಯೋಗ ಮಕ್ಕಳಿಗೆ ತಟ್ಟಲಿ ಎಂಬ ಆಶಯ ಗೀತಾ ಹೊಸಗಾಣಿಗೇರ ವ್ಯಕ್ತಪಡಿಸಿದರು.

ಕಾರ್ಯಕ್ರಮ ಗ್ರಾಪಂ ಅಧ್ಯಕ್ಷೆ ಕವಿತಾ ಬಡಿಗೇರ ಉದ್ಘಾಟಿಸಿದರು. ಮುಖ್ಯ ಶಿಕ್ಷಕ ಎಸ್.ಆಯ್. ಗಿಡ್ಡಪ್ಪಗೋಳ ಅಧ್ಯಕ್ಷತೆ ವಹಿಸಿದ್ದರು. ಗ್ರಾಪಂ ಉಪಾಧ್ಯಕ್ಷೆ ಸಿದ್ದಮ್ಮ ವಾಲಿಕಾರ, ಸದಸ್ಯ ಮುಬಾರಕ ಬಾಗಲಕೋಟ, ಸಾಹಿತಿ ಅಶೋಕ ಹಂಚಲಿ, ಪತ್ರಕರ್ತ ನೀಲೇಶ ಗಾಂಧಿ ಅತಿಥಿಗಳಾಗಿದ್ದರು.

ಸಾಧಕ ಪ್ರತಿಭಾವಂತ ಮಕ್ಕಳ ಪರವಾಗಿ ಪಾಲಕರಿಗೆ ಸನ್ಮಾನಿಸಿ ಗೌರವಿಸಲಾಯಿತು. ಯು.ಎ.ಹಿರೇಮಠ, ಮಹೇಶ ಗಾಳಪ್ಪಗೋಳ, ಗಂಗಾಧರ ಹಿರೇಮಠ, ಎಂ.ಎಚ್.ಬಳಬಟ್ಟಿ, ಕೆ.ಜಗದೇವಿ, ಸರಸ್ವತಿ ಈರಗಾರ, ಕಾಲೇಖಾನ್ ಇತರರಿದ್ದರು.

# ಪಿಯು ಪರೀಕ್ಷಾ ಕೇಂದ್ರಗಳಿಗೆ ಡಿಸಿ ಟಿ. ಭೂಬಾಲನ್ ಭೇಟಿ



**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರದ ದರಬಾರ ಹಾಗೂ ಲೋಯಾಲ ಕಾಲೇಜುಗಳಲ್ಲಿ ಸ್ಥಾಪಿಸಲಾಗಿರುವ ದ್ವಿತೀಯ ಪಿ ಯು ಪರೀಕ್ಷಾ ಕೇಂದ್ರಗಳಿಗೆ ಜಿಲ್ಲಾಧಿಕಾರಿ ಟಿ. ಭೂ ಬಾಲನ್ ಅವರು ಸೋಮವಾರದಂದು ಭೇಟಿ ನೀಡಿ ಪರೀಕ್ಷಾ ಕೇಂದ್ರಗಳ ಕಾರ್ಯ ವೈಖರಿಯನ್ನು ಪರಿಶೀಲಿಸಿದರು.

# ಕಬ್ಬಿನ ಬೆಳೆಯಿಂದ ಅರ್ಥಿಕ ಅಭಿವೃದ್ಧಿ :ಈಶಪ್ರಸಾದ ಶ್ರೀ

**ಉದಯರಶ್ಮಿ ನ್ಯೂಸ್**

ಇಂಡಿ: ಉತ್ತರ ಕರ್ನಾಟಕದ ಬಹುತೇಕ ಬಯಲು ಸೀಮೆ ಭೂಮಿಯಲ್ಲಿ ಕಬ್ಬು ಇಳುವರಿ ಹೆಚ್ಚಿಗೆ ಮತ್ತು ಉತ್ಕೃಷ್ಟತೆಯಿಂದ ಬರುತ್ತದೆ. ರೈತರು ಹೆಚ್ಚು ಕಬ್ಬು ಬೆಳೆ ಬೆಳೆಯಲು ಮುಂದಾಗಬೇಕು. ಕೃಷಿ ಇಲಾಖೆ ಯೋಜನೆಯಡಿ ಕಬ್ಬು ಬೆಳೆಯಲು ಅನೇಕ ಅನುಕೂಲತೆ ಇದೆ. ಇದರ ಪ್ರಯೋಜನ ಪಡೆಯಬೇಕು ಎಂದು ಅಥರ್ಗಾ ಗುರುದೇವ ಆಶ್ರಮದ ಈಶ ಪ್ರಸಾದ ಶ್ರೀಗಳು ಹೇಳಿದರು.

ತಾಲೂಕಿನ ಬೆನಕನಹಳ್ಳಿ ಗ್ರಾಮದ ರಾಜಶೇಖರ ನಿಂಬರಗಿ ಇವರ ತೋಟದ ವಸ್ತಿಯಲ್ಲಿ ನಡೆದ ಒಂದು ಎಕರೆಗೆ ಕಬ್ಬು 100 ಟನ್ ಇಳುವರಿ ಮತ್ತು ಸುಧಾರಿತ ನಿಂಬೆ ಬೆಳೆಯ ಕುರಿತು ನಡೆದ ವಿಚಾರ ಸಂಕೀರಣದಲ್ಲಿ ಮಾತನಾಡಿದರು.

ಮಹಾಲಿಂಗಪುರ ರೋಹಣಿ ಬಯೋಟೆಕ್ ಎಂ.ವಾಯ್. ಕಟ್ಟಿಯವರು ಮಾತನಾಡಿ, ಕಬ್ಬು ಬೆಳೆ ಸಾಗಿಸಲು ತಾಲೂಕಿನಲ್ಲಿ ಮತ್ತು ಜಿಲ್ಲೆಯಲ್ಲಿ ಸಾಕಷ್ಟು ಕಾರ್ಖಾನೆಗಳಿವೆ. ಹೀಗಾಗಿ ಉತ್ತಮ ತಳಿಯ ಬೀಜಗಳನ್ನು ಪಡೆದು ಉತ್ತಮ ರೀತಿಯಲ್ಲಿ ಬೆಳೆ ಬೆಳೆದರೆ ಅಧಿಕ ಇಳುವರಿ ಸಾಧ್ಯ ಎಂದ ಅವರು, ಮಹಾಲಿಂಗಪುರದಲ್ಲಿ ಸಿಗುವ ತಳಿಯಿಂದ ಒಂದು ಎಕರೆಗೆ 100 ಟನ್ ಬೆಳೆದ ನೂರಾರು ಉದಾಹರಣೆಗಳಿವೆ. ರೈತರು ಹೆಚ್ಚಿನ ಮಾಹಿತಿ ಪಡೆದು ಜಾಗೃತರಾಗಿ



ಕಬ್ಬಿನ ಇಳುವರಿ ಪಡೆಯುವತ್ತ ಗಮನ ಹರಿಸಬೇಕು ಎಂದರು.

ವಿಜಯಪುರದ ಆತ್ಮ ಯೋಜನೆಯ ಡಾ. ಎಂ.ಬಿ.ಪಟ್ಟಣಶೆಟ್ಟಿ, ರೈತರಾದ ರಾಜಶೇಖರ ನಿಂಬರಗಿ ಮಾತನಾಡಿ, ಇಂಡಿಯ ನಿಂಬೆ ಈಗಾಗಲೇ ಜಿಯೋಗ್ರಾಫಿಕಲ್ ಐಡೆಂಟಿಟಿ ಪಡೆದಿದ್ದು, ರೈತರು ನಿಂಬೆ ಬೆಳೆಯ ಕುರಿತು ಮಾಹಿತಿ ನೀಡಿದರು.

ಸಭೆಯಲ್ಲಿ ಪ್ರಗತಿಪರ ರೈತರಾದ ಹಲಸಂಗಿಯ ಅಶೋಕ ಬಿಂದುರಾವ ಕುಲಕರ್ಣಿ, ಶ್ರೀಮತಿ ಲಕ್ಷ್ಮೀ ಬಸಗೊಂಡ, ಶಿರಮಗೊಂಡ, ಶ್ರೀಮತಿ ಭಾರತಿ ಅಶೋಕ ಮೆಂಡೆಗಾರ, ಭೀರಪ್ಪ ವಗ್ಗಿ ಇವರನ್ನು ಸನ್ಮಾನಿಸಲಾಯಿತು.

ಸಭೆಯಲ್ಲಿ ಬೆನಕನಹಳ್ಳಿ ಗ್ರಾ.ಪಂ ಅಧ್ಯಕ್ಷೆ ಕವಿತಾ ಭಜಂತ್ರಿ,ಅಥರ್ಗಾ ಗ್ರಾ.ಪಂ ಅಧ್ಯಕ್ಷ ನಾಗುಗೌಡ ಪಾಟೀಲ, ಕಾಶಿನಾಥ ಹಚಡದ, ರಾಯಗೊಂಡ ಅಂಕಲಗಿ, ಶಿವಪ್ಪ ಹೊನಕಟ್ಟಿ, ಸುನೀಲ ನಾರಾಯಣಕರ, ಐ.ಜಿ.ಕನ್ನೂರ, ಶಿವಾನಂದ ಜೋತೆಪೆನ್ನವರ, ಸಂದೀಪಗೌಡ ಪಾಟೀಲ, ವಿನಾಯಕ ಭೋಸಗಾ ಮತ್ತಿತರಿದ್ದರು.

## ಬಮ್ಮನಹಳ್ಳಿ ಮಠದಲ್ಲಿ ಜಾತ್ರಾ ಮಹೋತ್ಸವ । ಲಿಂ.ಮಳೇಂದ್ರ ಶಿವಾಚಾರ್ಯರ ಬೆಳ್ಳಿ ಮೂರ್ತಿ ಉತ್ಸವ । ಧರ್ಮಸಭೆ

# ಶಿಕ್ಷಣದ ಜೊತೆಗೆ ಸಂಸ್ಕಾರ ಮುಖ್ಯ :ಶಾಸಕ ಮನಗೂಳಿ



**ಉದಯರಶ್ಮಿ ನ್ಯೂಸ್**

ಆಲಮೇಲ: ಇಂದಿನ ಜನರಿಗೆ ಎಲ್ಲ ರೀತಿಯ ಸಿರಿ ಸಂಪತ್ತು ಹೊಂದಿದ್ದರೂ ಪ್ರೀತಿ ಮಮತೆ ಇಲ್ಲದೆ ಕೊರಗುತ್ತಿದ್ದಾರೆ. ಅದಕ್ಕೆ ಸಂಸ್ಕಾರ ಇಲ್ಲದೆ ಇರುವುದೇ ಕಾರಣ, ನಮ್ಮ ಧರ್ಮದ ಸಂಸ್ಕಾರ ಸಂಪ್ರದಾಯ ಎಲ್ಲರ ಜೀವನದಲ್ಲಿ ಅಳವಡಿಸಿಕೊಳ್ಳಬೇಕಾಗಿದೆ ಅಂದಾಗ ಮಾತ್ರ ಸಮಾಜ ಪರಿವರ್ತನೆ ಆಗಲು ಸಾಧ್ಯ ಎಂದು ಆಲಮೇಲ ಹಿರೇಮಠದ ಚಂದ್ರಶೇಖರ ಶಿವಾಚಾರ್ಯರು ಹೇಳಿದರು.

ಭಾನುವಾರ ರಾತ್ರಿ ತಾಲೂಕಿನ ಬಮ್ಮಹಳ್ಳಿ ಗ್ರಾಮದಲ್ಲಿ ಆಲಮೇಲ ಗುರು ಸಂಸ್ಥಾನ ಹಿರೇಮಠದ ಲಿಂ. ಮಳೇಂದ್ರ ಶಿವಾಚಾರ್ಯರ ಪುಣ್ಯಸ್ಮರಣೆಯ ಅಂಗವಾಗಿ ಬಮ್ಮನಹಳ್ಳಿ ಶಾಖಾ ಮಠದಲ್ಲಿ ಜಾತ್ರಾ ಮಹೋತ್ಸವ ಮತ್ತು ಲಿಂ. ಮಳೇಂದ್ರ ಶಿವಾಚಾರ್ಯರ ಬೆಳ್ಳಿ ಮೂರ್ತಿ ಉತ್ಸವ ಹಾಗೂ ಧರ್ಮ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಇಂದು ಎಷ್ಟೇ ಗಳಿಸಿದರೂ ವೃದ್ದಾಪ್ಯ ಜೀವನ ವೃದ್ಧಾಶ್ರದಲ್ಲಿ ಕಳೆಯುವಂತಾಗುತ್ತಿದೆ. ಅದಕ್ಕೆ ಕಾರಣ ಸಂಸ್ಕಾರ ಇಲ್ಲದಿರುವುದು. ಈ ರೀತಿಯ ಕೆಟ್ಟ ಸಂಪ್ರದಾಯ ಸುಶಿಕ್ಷಿತರಲ್ಲೆ ಹೆಚ್ಚಾಗುತ್ತಿದೆ. ಅದನ್ನು ಹೋಗಲಾಡಿಸಬೇಕು ಎಂದರೆ ಸಂಸ್ಕಾರ ಸಂಪ್ರದಾಯ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕಾಗಿದೆ ಎಂದರು.

ಗ್ರಾಮೀಣ ಭಾಗದ ರೈತಾಪಿ ವರ್ಗ ಮತ್ತು ಕೂಲಿಕಾರ್ಮಿಕ ಬಡ ಜನರಲ್ಲಿ ಧರ್ಮದ ಸಂಸ್ಕಾರವಿದೆ, ತಂದೆ ತಾಯಿ, ಗುರು ಹಿರಿಯರನ್ನು ಗೌರವಿಸುತ್ತಾರೆ. ಅವರಲ್ಲಿ ಸಂಸ್ಕಾರ ಸಂಪ್ರದಾಯ ಉಳಿದುಕೊಂಡಿದೆ. ಆದರೆ ಉನ್ನತ ಶಿಕ್ಷಣ ಪಡೆದ ಸುಶಿಕ್ಷಿತರೆ ಸಂಸ್ಕಾರ ಸಂಪ್ರದಾಯ ಮರೆಯುತ್ತಿದ್ದಾರೆ, ವಯೋವೃದ್ದ ತಂದೆ ತಾಯಿಯರನ್ನು ವೃದ್ಧಾಶ್ರಮಕ್ಕೆ ದೂಡುವ ಮೂಲಕ ಸಮಾಜಕ್ಕೆ ಕೆಟ್ಟ ಸಂದೇಶವನ್ನು ನೀಡುತ್ತಿದ್ದಾರೆ. ಇದನ್ನು ಹೋಗಲಾಡಿಸಬೇಕು ಎಂದರೆ ತಾಯಿಯಿಂದ ಮಾತ್ರ ಸಾಧ್ಯ. ಮಕ್ಕಳಿಗೆ ಬಾಲ್ಯದಿಂದಲೆ ಮೊದಲು ಸಂಸ್ಕಾರ ಕಲಿಸಬೇಕಾಗಿದೆ. ಅಂದಾಗ ಮಾತ್ರ ನಮ್ಮ ಧರ್ಮದ ಸಂಸ್ಕಾರ ಸಂಪ್ರದಾಯ ಉಳಿಯಲಿದೆ, ಸಮಾಜ ಪರಿವರ್ತನೆ ಆಗಲು ಸಾಧ್ಯ ಎಂದು ಹೇಳಿದರು.

ಬಂಥನಾಳದ ವೃಷಭಲಿಂಗ ಮಹಾಸ್ವಾಮಿಗಳು ಮಾತನಾಡಿ, ಧರ್ಮವನ್ನು ಯಾರು ರಕ್ಷಣೆ ಮಾಡುತ್ತಾರೋ ಅವರನ್ನು ಧರ್ಮ ರಕ್ಷಣೆ ಮಾಡಲಿದೆ. ನಿಜವಾದ ಧರ್ಮ ಯಾವುದು ಎಂದರೆ ಕೆಳಗೆ ಬಿದ್ದಂತವರನ್ನು ಮೇಲೆತ್ತುವುದೇ ನಿಜವಾದ ಧರ್ಮ. ಸ್ವಾಮಿಗಳಿಗೆ ಗುರು ವಿರಕ್ತರೆಂಬ ಭೇದ ಭಾವವಿಲ್ಲ. ಧರ್ಮದ ಜಾಗೃತಿ ಮಾಡುವುದೇ ಸ್ವಾಮಿಗಳ ಕರ್ತವ್ಯವಾಗಿದೆ. ಸಂಸ್ಕಾರ ಸಂಪ್ರದಾಯ ಬೆಳೆಸುವ ಕೆಲಸ ಮಠ ಮಂದಿರಗಳು ಮಾಡುತ್ತಿವೆ ಎಂದು ಹೇಳಿದರು.

ಶಾಸಕ ಅಶೋಕ ಮನಗೂಳಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಇಂದಿನ ತಂತ್ರಜ್ಞಾನ ಕಾಲದಲ್ಲಿ ಗುಣಮಟ್ಟದ ಶಿಕ್ಷಣವಿದ್ದರೆ ಸಾಲದು, ಶಿಕ್ಷಣದ ಜೊತೆಗೆ ಸಂಸ್ಕಾರ ಮುಖ್ಯವಾಗಿದೆ, ಸಂಸ್ಕಾರಯುತ ಶಿಕ್ಷಣ ಇಂದಿನ ಮಕ್ಕಳಿಗೆ ಅವಶ್ಯಕತೆ ಇದೆ. ಪುರಾತನ ಸಂಪ್ರದಾಯ ಸಂಸ್ಕಾರ ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕಾಗಿದೆ. ಸಂಸ್ಕಾರ ಇದ್ದರೆ ಮಾತ್ರ ಸಮಾಜ ಪರಿವರ್ತನೆ ಆಗಲು ಸಾಧ್ಯ ಎಂದು ಹೇಳಿದರು.

ಅಫಜಲಪೂರದ ವಿಶ್ವರಾಧ್ಯ ಮಳೇಂದ್ರ ಶಿವಾಚಾರ್ಯರು, ಕೆಪಿಸಿಸಿ ಪ್ರಧಾನ ವಕ್ತಾರ ಸಂಗಮೇಶ ಬಬಲೇಶ್ವರ, ಜಿಲ್ಲಾ ಕಾಂಗ್ರೆಸ್ ಪಕ್ಷದ ಅಧ್ಯಕ್ಷ ರಾಜು ಅಲಗೂರ ಮಾತನಾಡಿದರು.

ಮಮದಾಪೂರದ ಅಭಿನವ ಮುರುಗೇಂದ್ರ ಮಹಾಸ್ವಾಮಿಜಿ, ಯಂಕಂಚಿಯ ಅಭಿನವ ರುದ್ರಮುನಿ ಶಿವಾಚಾರ್ಯರು, ಬಮ್ಮನಹಳ್ಳಿಯ ನರಸಿಂಹ ಮಹಾರಾಜರು, ಕುಮಸಗಿಯ ಶಿವಾನಂದ ಸ್ವಾಮೀಜಿ ಮತ್ತು ಆಲಮೇಲ, ಕಣ್ಣಿ, ತಡವಲಗಾ, ಮಾಶಾಳ, ಸೋಮಜಾಳ, ನೀಲೂರ ವಿವಿದ ಮಠಾಧೀಶರು ಸಾನಿದ್ಯ ವಹಿಸಿದ್ದರು.

ಅರ್ಬನ್ ಬ್ಯಾಂಕ್ ಅಧ್ಯಕ್ಷ ಶಿವುಕುಮಾರ ಗುಂದಗಿ, ಬಸವರಾಜ ಧನಶ್ರೀ, ಕಾಂಗ್ರೆಸ್ ಮುಖಂಡ ಗಂಗಾಧರ ಸಂಬಣ್ಣಿ, ಬಿಎಚ್. ಬಿರಾದಾರ, ಡಾ। ದಯಾನಂದ ಬಿರಾದಾರ, ಕಸಾಪ ತಾಲೂಕ ಅಧ್ಯಕ್ಷ ಶಿವಶರಣ ಗುಂದಗಿ, ಶ್ರೀಶೈಲ ಮಠಪತಿ, ರಾಜಕುಮಾರ ಬಿರಾದಾರ ಮುಂತಾದವರು ಇದ್ದರು.

# ಶಾಂತವೀರ ಪಟ್ಟಾಧ್ಯಕ್ಷರ ಬದುಕೇ ಇತಿಹಾಸ :ರುದ್ರಮನಿ ಶ್ರೀ




**ಉದಯರಶ್ಮಿ ನ್ಯೂಸ್**

ಸಿಂದಗಿ: ಸಿಂದಗಿಯ ಮಾನವೀಯತೆಗೆ ಹೊಸ ಭಾಷೆ ಬರೆದ ಸಿಂದಗಿಯ ಸಿರಿ ಶಾಂತವೀರ ಪಟ್ಟಾಧ್ಯಕ್ಷರ ಬದುಕೇ ಒಂದು ಇತಿಹಾಸ ಎಂದು ಯಂಕಂಚಿ ಹಿರೇಮಠದ ಶ್ರೀ ಅಭಿನವ ರುದ್ರಮನಿ ಶಿವಾಚಾರ್ಯರು ಹೇಳಿದರು.

ಪಟ್ಟಣದ ಊರಿನ ಹಿರಿಯಮಠದಲ್ಲಿ ಗುರುವಾರ ನಡೆದ ಲಿಂ.ಶ್ರೀ ಶಾಂತವೀರ ಪಟ್ಟಾಧ್ಯಕ್ಷರ 44ನೆಯ ಪುಣ್ಯ ಸ್ಮರಣೋತ್ಸವ ಮತ್ತು ಗದುಗಿನ ತೋಂಟದಾರ್ಯ ಮಠದ ಲಿಂ.ಡಾ.ಸಿದ್ದಲಿಂಗ ಶ್ರೀಗಳ 6ನೆಯ ಗುರು ಸ್ಮರಣೆ ಕಾರ್ಯಕ್ರಮದಲ್ಲಿಂ ಯುವ ಸಾಹಿತಿ ರೇಣುಕಾಚಾರ್ಯ ಹಿರೇಮಠ ಅವರ ಸಾಹಿತ್ಯದಲ್ಲಿ ಅಂತರಾಷ್ಟ್ರೀಯ ಹಿಂದೂಸ್ತಾನಿ ಸಂಗೀತ ಕಲಾವಿದ ಪಂ.ಶರಣ್ ಚೌಧರಿ ಅವರ ಸಂಗೀತ ನಿರ್ದೇಶನದ ಹಾಗೂ ಪಂಡಿತ ರಾಘವೇಂದ್ರ ಜೋಷಿ ಅವರ ಸಂಗೀತ ಸಂಯೋಜನೆಯಲ್ಲಿ ಮೂಡಿ ಬಂದ 'ಸಿಂದಗಿಯ ಶ್ರೀರಕ್ಷೆ' ಎನ್ನುವ ಭಕ್ತಿಗೀತೆಯನ್ನು ಲೋಕಾರ್ಪಣೆ ಮಾಡಿ ಮಾತನಾಡಿದ ಅವರು, ಸಿಂದಗಿಯ ಶ್ರೀಗಳು ಆಸ್ತಿ, ಹಣ, ಅಂತಸ್ತುಗಳ ಬೆನ್ನು ಹತ್ತದೇ ಅದರ ಬದಲಿಗೆ ನಡೆದಾಡುವ ಅನೇಕ ಮಠಾಧೀಶರನ್ನು ಬೆಳೆಸಿ ಅವರಿಗೆ ಸಾಮಾಜಿಕ ಕಾಯಕವನ್ನು ಕಲಿಸಿದವರು. ಉತ್ತರ ಕರ್ನಾಟಕದಲ್ಲಿ ಅವರ ಹೆಸರು ಚಿರಸ್ಥಾಯಿ. ಬದುಕಿನುದ್ದಕ್ಕೂ ಬಡ, ಅನಾಥ ಮಕ್ಕಳ ಜೀವನಕ್ಕಾಗಿಯೇ ದುಡಿದವರು ಎಂದರು.

ಈ ವೇಳೆ ಬೆಂಗಳೂರಿನ ಅಂತರಾಷ್ಟ್ರೀಯ ಹಿಂದುಸ್ತಾನಿ ಕಲಾವಿದ ಪಂ.ಶರಣ್ ಚೌಧರಿ, ತಬಲಾ ವಾದಕ ಪಂ.ರಾಘವೇಂದ್ರ ಜೋಷಿ, ಯುವ ಸಾಹಿತಿ ರೇಣುಕಾಚಾರ್ಯ ಹಿರೇಮಠ, ಹಾಸ್ಯ ಕಲಾವಿದ ಪ್ರಶಾಂತ ಚೌಧರಿ, ಡಾ.ಪ್ರಕಾಶ ರಾಗರಂಜನಿ, ಪೂಜಾ ಹಿರೇಮಠ ಅವರಿಗೆ ಶ್ರೀಮಠದಿಂದ ಗೌರವಿಸಲಾಯಿತು.

ನಂತರ ರಾಗರಂಜನಿ ಸಂಗೀತ ಕೇಂದ್ರದ ತಂಡದವರಿಂದ ಸಂಗೀತ ಕಾರ್ಯಕ್ರಮ ನೆರವೇರಿತು. ವೇದಿಕೆ ಮೇಲೆ ಊರಿನ ಹಿರೇಮಠದ ಶಿವಾನಂದ ಶಿವಾಚಾರ್ಯರು, ಸಂಶಿಯ ವಿರಕ್ತಮಠದ ಚೆನ್ನಬಸವ ದೇವರು ಉಪಸ್ಥಿತರಿದ್ದರು. ಸಂಗೀತಗಾರ ರೇಣುಕ ಗವಾಯಿಗಳು ಪ್ರಾರ್ಥಿಸಿದರು, ಸಿದ್ದಲಿಂಗ ಕಿಣಗಿ ಸ್ವಾಗತಿಸಿದರು. ಗದಿಗಯ್ಯ ನಂದಿಮಠ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಶ್ರೀಮಠದ ಭಕ್ತರು ಉಪಸ್ಥಿತರಿದ್ದರು.

# ಶಿಕ್ಷಕ ದಿ.ಬೈರಾಮಡಗಿ ಗೆ ಕೃತಜ್ಞತಾಪೂರ್ವಕ ನಮನ




**ಉದಯರಶ್ಮಿ ನ್ಯೂಸ್**

ಇಂಡಿ: ಮಹಾದೇವ ಬೈರಾಮಡಗಿ ಅವರು ಕೇವಲ ಶಿಕ್ಷಕರಾಗಿ ಸೇವೆ ಸಲ್ಲಿಸದೆ, ಇಡೀ ಮನುಕುಲದ ಬಗ್ಗೆ ಅತ್ಯಂತ ಕಾಳಜಿ ಸೇವಕರಾಗಿ ಕಾರ್ಯ ನಿರ್ವಹಿಸಿದ್ದಾರೆಂದು ತಳವಾರ ಪರಿವಾರ ಸಮಾಜ ಸೇವಾ ಸಂಘದ ಪ್ರಧಾನ ಕಾರ್ಯದರ್ಶಿ ಹುಚ್ಚಪ್ಪ ತಳವಾರ ಹೇಳಿದರು.

ರವಿವಾರ ಪಟ್ಟಣದ ಎನ್ ಎ ಸಿ ಸಹಕಾರಿ ಸಂಘದ ಸಭಾಭವನದಲ್ಲಿ ಶಿಕ್ಷಕ ಮಹಾದೇವ ಬೈರಾಮಡಗಿ ಅವರ ಹೃದಯ ಪೂರ್ವಕ ನಮನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಶಿಕ್ಷಕ ಮಹಾದೇವ ಬೈರಾಮಡಗಿ ಅವರ ಅಕಾಲಿಕ

ನಿಧನ ಸಮುದಾಯ, ಸಮಾಜಕ್ಕೆ ದೊಡ್ಡ ಪ್ರಮಾಣದ ಹಾನಿಯಾಗಿದೆ. ಅವರು ಅತ್ಯಂತ ಸರಳ ಸಜ್ಜನಿಕೆ ನಿಸ್ವಾರ್ಥ ಸೇವೆ ಮಾಡುತ್ತಿದ್ದರು.

ನ್ಯಾಯವಾದಿ ಎಸ್.ಬಿ. ಕೆಂಬೋಗಿ, ಪತ್ರಕರ್ತ ಶಂಕರಲಿಂಗ ಜಮಾದಾರ ಮಾತನಾಡಿದರು.

ಈ ಸಂದರ್ಭದಲ್ಲಿ ಮಹಾಂತೇಶ ಬಡದಾಳ, ಮಲ್ಲಿಕಾರ್ಜುನ ಹೊರ್ತಿ, ಡಾ. ಸುರೇಶ ವಿಜಯಪುರ, ಜಟ್ಟಿಂಗರಾಯ ತಳವಾರ, ಸೋಮು ಜಮಾದಾರ, ಶಿಕ್ಷಕ ಬಿ ಎನ್ ಜಮಾದಾರ, ಆರ್.ಜ. ಗಬ್ಬೂರ, ಆರ್ ಕೆ ವಾಲಿಕಾರ, ಈರಣ್ಣ ಜಮಾದಾರ, ಸುರೇಶ್ ಡೊಂಗ್ರೋಜ, ರವಿ ರಾಯಜಿ, ಎಸ್ ಐ ಕೋಳಿ, ಅರವಿಂದ ದೊಡಮನಿ, ವಿಶ್ವನಾಥ ಮಣಗಿರಿ, ಸುನೀಲ ವಾಲಿಕಾರ ಸೇರಿದಂತೆ ಇನ್ನೂ ಅನೇಕರು ಉಪಸ್ಥಿತರಿದ್ದರು.

# ವಾಯುಮಾಲಿನ್ಯ ನಿಯಂತ್ರಣ ಅರಿವು ಕಾರ್ಯಕ್ರಮ



**ಉದಯರಶ್ಮಿ ನ್ಯೂಸ್**

ವಿಜಯಪುರ: ವಿಜಯಪುರ ಪ್ರಾದೇಶಿಕ ಸಾರಿಗೆ ಕಚೇರಿ ಆವರಣದಲ್ಲಿ ವಾಯುಮಾಲಿನ್ಯ ನಿಯಂತ್ರಣ ಕುರಿತು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು, ಸಸಿ ನೆಡುವುದರ ಮೂಲಕ ಈ ಕಾರ್ಯಕ್ರಮವನ್ನು ಚಾಲನೆಗೊಳಿಸಲಾಯಿತು.

ಈ ವೇಳೆ ಪ್ರಾದೇಶಿಕ ಸಾರಿಗೆ ಅಧಿಕಾರಿಯಾದ ವಸಂತ ಈಶ್ವರ ಚವ್ಹಾಣ, ಹಿರಿಯ ಮೋಟಾರು ವಾಹನ ನಿರೀಕ್ಷಕರಾದ ಜಿ.ಅರ್. ಹೊಸಮನಿ, ಮೋಟಾರು ವಾಹನ ನಿರೀಕ್ಷಕರಾದ ಮಹ್ಮದ ಹುಸೇನ್, ರಾಜು.ಬಿ.ಅಳಗುಂಡಿ, ಎನ್. ಎಂ.ಶೇಖ್, ಸಂತೋಷ ಪಾಟೀಲ, ಮೋಟಾರು ವಾಹನ ಮಾಲಕರ ಪ್ರತಿನಿಧಿಗಳಾದ ಶ್ರೀಮಂತ ಝುಳಕಿ, ರಾಜು ಕಟ್ಟಿಮನಿ ಸೇರಿದಂತೆ ಸಾರ್ವಜನಿಕರು ಉಪಸ್ಥಿತರಿದ್ದರು.

# ಸಾಹಿತಿದ್ವಯ ಡಾ. ಚನ್ನಪ್ಪ ಕಟ್ಟಿ & ಡಾ.ಎಂ.ಎಂ.ಪಡಶೆಟ್ಟಿ ಗೆ ಸನ್ಮಾನ



**ಉದಯರಶ್ಮಿ ನ್ಯೂಸ್**

ವಿಜಯಪುರ: ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವ್ಯಾಪ್ತಿಯ ಕುವೆಂಪು ಭಾಷಾ ಭಾರತಿ ಪ್ರಾಧಿಕಾರ ಅಧ್ಯಕ್ಷರಾಗಿ ಸಿಂದಗಿಯ ಹಿರಿಯ ಸಾಹಿತಿ, ಕಥ–'ಗಾರ, ನಿವೃತ್ತ ಪ್ರಾಚಾರ್ಯ ಡಾ. ಚನ್ನಪ್ಪ ಕಟ್ಟಿ ಹಾಗೂ ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯರಾಗಿ ಆಯ್ಕೆಯಾದ ಜಾನಪದ ವಿದ್ವಾಂಸ, ನಿವೃತ್ತ ಪ್ರಾಧ್ಯಾಪಕ ಡಾ.ಎಂ. ಎಂ.ಪಡಶೆಟ್ಟಿ ಅವರನ್ನು ಶಾಸಕ ಅಶೋಕ ಮನಗೂಳಿ ಸನ್ಮಾನಿಸಿ ಗೌರವಿಸಿದರು.

ಈ ವೇಳೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಹಾಗೂ ಮೇಲ್ವಿಚಾರಣೆಯ ಸದಸ್ಯ ರವಿರಾಜ್ ದೇವರಮನಿ, ರವಿ ಗೋಲಾ, ಚನ್ನು ಪಡಶೆಟ್ಟಿ ಸೇರಿದಂತೆ ಅನೇಕರು ಇದ್ದರು

# ಸ್ತ್ರೀಯರಿಗೆ ಸಮಾನ ಅವಕಾಶ ಕಲ್ಪಿಸಿಕೊಟ್ಟಿದ್ದೇ ಬಸವಣ್ಣ

**ಉದಯರಶ್ಮಿ ನ್ಯೂಸ್**

ಸಿಂದಗಿ: ಬಸವಣ್ಣನವರ ತತ್ವಾದರ್ಶಗಳು, ಮೌಲ್ಯಗಳು ವಿದ್ಯಾರ್ಥಿಗಳು ಜೀವನದಲ್ಲಿ ಅಳವಡಿಸಿಕೊಳ್ಳಿ ಎಂದು ಪ್ರಚಾರ್ಯ ಎಂ.ಎಸ್.ಹೈಯಾಳಕರ ಹೇಳಿದರು.

ಪಟ್ಟಣದ ಶ್ರೀಪದ್ಮರಾಜ ಮಹಿಳಾ ಪಪೂ ಕಾಲೇಜಿನಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ತಾಲೂಕು ಘಟಕ ಸಿಂದಗಿ ವತಿಯಿಂದ ಹಮ್ಮಿಕೊಂಡ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಬಸವಣ್ಣನವರ ಭಾವಚಿತ್ರಕ್ಕೆ ಪುಷ್ಪಾರ್ಪನೆ ಮಾಡುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಧಾರ್ಮಿಕ, ಆರ್ಥಿಕ ಸಾಮಾಜಿಕ ಕ್ರಾಂತಿಯಿಂದ ಬಸವಣ್ಣನವರು ಹೆಸರುವಾಸಿಯಾದರು. ಬಸವಣ್ಣ ಜನ್ಮವೆತ್ತುವ ಸಮಯದಲ್ಲಿ ಕ್ರಾಂತಿ ಮಾಡಿರುವುದು ಒಂದು ಇತಿಹಾಸ.



ಬಸವ ಧರ್ಮ ಜಗತ್ತಿನ ಯಾವ ದೇಶದಲ್ಲಿಯೂ ದೊರೆಯುದಿಲ್ಲ. ಸ್ತ್ರೀಯರಿಗೆ ಸಮಾನ ಅವಕಾಶ ಕಲ್ಪಿಸಿಕೊಟ್ಟಿದ್ದೇ ಬಸವಣ್ಣ. ಮಕ್ಕಳು ವಚನಗಳನ್ನು ಪಠಣ ಮಾಡುವುದರ ಜೊತೆಗೆ ಸಾರಾಂಶವನ್ನು ತಿಳಿದುಕೊಳ್ಳುವುದು ಮುಖ್ಯವಾಗಿದೆ. ಸಮ ಸಂಸ್ಕೃತಿ ಸಮಾಜ ಲಿಂಗಾಯತ ಧರ್ಮ ಇದು ವಿಶ್ವಧರ್ಮವಾಗಬೇಕು. ಇದರ ಜವಾಬ್ದಾರಿ ಇಂದಿನ ಯುವಕರ ಮೇಲಿದೆ ಎಂದರು.

ಈ ವೇಳೆ ಉಪನ್ಯಾಸ ನೀಡಲು ಆಗಮಿಸಿದ ಎಚ್.ಜಿ.ಕಾಲೇಜಿನ ಉಪನ್ಯಾಸಕಿ ಮುಕ್ತಾಯಕ್ಕ ಕತ್ತಿ ಮಾತನಾಡಿ, ಬಸವಣ್ಣನವರು ಅನುಭವ ಮಂಟಪದ ಮೂಲಕ ಪ್ರಜಾಪ್ರಭುತ್ವದ ಬುನಾದಿ ಹಾಕಿದವರು. ಜಾತ್ಯಾತೀತ, ವರ್ಗ ರಹಿತ ಸಮಾಜ ನಿರ್ಮಾಣ ಮಾಡಿ, ಸಾಮಾಜಿಕ ಕಾಂತ್ರಿಗೆ ನಾಂದಿ ಹಾಡಿದವರು. ಮಹಿಳೆಯರಿಗೆ ಸ್ವಾತಂತ್ರ್ಯವಿದೆ ಎಂದು ಇಡೀ ವಿಶ್ವಕ್ಕೆ ತಿಳಿಸಿ ಮಾದರಿಯಾಗಿದ್ದಾರೆ. ಇಂತಹ ಮಹಾನ್ ಚೇತನ, ವಿಶ್ವಜ್ಯೋತಿ, ನಮ್ಮ ವಿಜಯಪುರ ಜಿಲ್ಲೆಯಲ್ಲಿ ಜನಿಸಿದ್ದು ನಮಗೆ ಹೆಮ್ಮೆಯ ವಿಷಯ. ಅವರ ತತ್ವ ಸಿದ್ಧಾಂತಗಳನ್ನು ಇಡೀ ರಾಷ್ಟ್ರದಾದ್ಯಂತ ಪಸರಿಸುವ ಕಾರ್ಯ ಇಂದಿನ ಪೀಳಿಗೆಯ ಜವಾಬ್ದಾರಿ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಶರಣ ಸಾಹಿತ್ಯ ಪರಿಷತ್ ತಾಲೂಕಾಧ್ಯಕ್ಷ ಡಾ.ಶರಣಬಸವ ಜೋಗುರ, ಪ್ರಸನ್ನಕುಮಾರ ಜೋಗುರ, ದತ್ತಿ ದಾನಿಗಳಾದ ರಾಜಶೇಖರ ಶಹಾಪುರ, ಶಿವಪ್ಪ ಗವಸಾನಿ, ಸುನೀಲ ದೇವರಮನಿ, ಡಾ.ಸೀಮಾ ವಾರದ, ಪ್ರಾಚಾರ್ಯ ಎಸ್. ಎಂ.ಪೂಜಾರಿ, ಮಹಲಿನಮಠ, ಸಿದ್ದಲಿಂಗ ಕಿಣಗಿ, ಭೀಮಾಶಂಕರ ಅರಳಗುಂಡಗಿ, ಶಂಕರ್ ಕುಂಬಾರ, ಲಕ್ಷ್ಮೀ ಮಾರ್ಸನಳ್ಳಿ, ಸತೀಶ ಕಕ್ಕಸಗೇರಿ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಮೇವು ದೇಣಿಗೆ ನೀಡಿ ಗೋವುಗಳನ್ನು ಸಂರಕ್ಷಿಸಿ



**ಉದಯರಶ್ಮಿ ನ್ಯೂಸ್**

ಸಿಂದಗಿ: ಈ ಬಾರಿ ರಾಜ್ಯದಲ್ಲಿ ಭರದ ಛಾಯೆ ಮೂಡಿದೆ. ದನ ಕರುಗಳಿಗೆ ಮೇವಿನ ಅವಶ್ಯಕತೆಯಿದೆ ಎಂದು ಶ್ರೀ ಸಂಗಮೇಶ್ವರ ಕ್ರೀಡಾ ಮತ್ತು ಸಾಂಸ್ಕೃತಿಕ ಸಂಘದ ಅಧ್ಯಕ್ಷ ಶರದ ನಾಡಗೌಡ ಹೇಳಿದರು.

ಪಟ್ಟಣದ ಸಂಗಮೇಶ್ವರ ದೇವಾಸ್ಥಾನ ಹಿಂದುಗಡೆ ಇರುವ ಶ್ರೀಕೃಷ್ಣಾ ಗೋರಕ್ಷಾ ಕೇಂದ್ರಕ್ಕೆ ಮೇವು ದೇಣಿಗೆ ನೀಡಿ ಮಾತನಾಡಿದ ಅವರು, ಈ ಬಾರಿ ಭೀಕರ ಬರಗಾಲ ಎದುರಾಗಿದೆ. ಮಾನವನಿಗೆ ಮಾತನಾಡಲೂ ಬಾಯಿ ಇದೆ. ಆದರೆ ಮುಖ ಪ್ರಾಣಿಗಳಿಗೆ ಹೇಳಲು ಬಾಯಿಲ್ಲ. ಅವುಗಳಿಗೆ ಮೇವು ದೇಣಿಗೆ ನೀಡುವುದು ನಮ್ಮ ಕರ್ತವ್ಯ. ಇರುವವರು ಆದಷ್ಟೂ ಮೇವು ದೇಣಿಗೆ ನೀಡಿ ಗೋವುಗಳನ್ನು ಸಂರಕ್ಷಿಸಿ ಎಂದರು.

ಈ ವೇಳೆ ಶ್ರೀಕೃಷ್ಣಾ ಗೋರಕ್ಷಾ ಕೇಂದ್ರ ಸಂಚಾಲಕ ರಾಕೇಶ ಮಠ, ಸಂಘದ ಉಪಾಧ್ಯಕ್ಷ ಡಾ.ಗಿರೀಶ ಕುಲಕರ್ಣಿ, ಕಾರ್ಯದರ್ಶಿ ಮುತ್ತು ಪಟ್ಟಣಶೆಟ್ಟಿ, ಸದಸ್ಯರಾದ ರಾಜೀವ ಬೈರಿ, ಡಾ.ಸುನೀಲ ಪಾಟೀಲ, ಅನೀಲ ಪಟ್ಟಣಶೆಟ್ಟಿ, ಶಿವು ವಾರದ, ನವೀನ ಶಹಾಪೂರ, ಪ್ರಕಾಶ ಹಿರೇಕುರುಬರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಸುಖಕರ ಜೀವನಕ್ಕೆ ಆರೋಗ್ಯವೇ ಭಾಗ್ಯ :ಡಾ.ಮಂಜುನಾಥ

**ಉದಯರಶ್ಮಿ ನ್ಯೂಸ್**

ಮೋರಟಗಿ: ಮಾನವ ಎಷ್ಟು ವರ್ಷ ಬದುಕಿದ್ದಾನೆ ಎನ್ನುವುದು ಮುಖ್ಯವಲ್ಲ, ಎಷ್ಟು ಸದೃಡ ಮತ್ತು ಆರೋಗ್ಯವಾಗಿ ಬದುಕುತ್ತಾನೆ ಎನ್ನುವುದು ಮುಖ್ಯ. ಆರೋಗ್ಯ ಭಾಗ್ಯಕಿಂತ ಇನ್ನೊಂದು ಭಾಗ್ಯವಿಲ್ಲ, ಸುಖಿಕರ ಜೀವನಕ್ಕೆ ಅರೋಗ್ಯವೇ ಭಾಗ್ಯ ಎಂದು ಡಾ.ಮಂಜುನಾಥ್ ಟಿ.ಡಿ ಹೇಳಿದರು.




ತಾಲೂಕಿನ ಮೋರಟಗಿ ಗ್ರಾಮದ ಸಮುದಾಯ ಅರೋಗ್ಯ ಕೇಂದ್ರದಲ್ಲಿ ಜುವಾರಿ ಫರ್ಮ್ ಹಬ್ ಲಿಮಿಟೆಡ್ ಜೈಕಿಸಾನ್ ಜಂಕ್ಷನ್ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡ ಉಚಿತ ಅರೋಗ್ಯ ಶಿಬಿರ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಅರೋಗ್ಯದಿಂದ ಜೀವನ ಕಳೆಯುವ ಒಬ್ಬ ಸಾಮಾನ್ಯ ವ್ಯಕ್ತಿ ಜೀವನದಲ್ಲಿ ಏನನ್ನಾದರೂ ಸಾಧಿಸಬಹುದು. ಅನಾರೋಗ್ಯಕ್ಕೆ ತುತ್ತಾದರೆ ನೆಮ್ಮದಿಯು ಜೀವನ ಕಳೆಯಲು ಸಾಧ್ಯವಿಲ್ಲ. ಸಾರ್ವಜನಿಕರು ಆದಷ್ಟು ಆರೋಗ್ಯದ ಕಡೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಮಕ್ಕಳನ್ನು ದುಶ್ಚಟಗಳಿಂದ ದೂರವಿಡಬೇಕು. ತಮ್ಮೆಲ್ಲರ ಅರೋಗ್ಯ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಸರಕಾರ ಹತ್ತು ಹಲವಾರು ಯೋಜನೆಗಳು ಉಚಿತವಾಗಿ ನೀಡುತ್ತಿದೆ. ಅದರ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಈ ವೇಳೆ ನುರಿತ ವೈದ್ಯರಿಂದ ರಕ್ತ, ಬಿಪಿ, ಶುಗರ್ ಹಾಗೂ ಕಣ್ಣಿನ ತಪಾಸಣೆಯನ್ನು 200ಕ್ಕೂ ಅಧಿಕ ಜನರಿಗೆ ತಪಾಸಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಗ್ರಾಪಂ ಅಧ್ಯಕ್ಷ ಪ್ರತಿನಿಧಿ ರವಿಕಾಂತ ನಡುವಿನಕೇರಿ, ಉಪಾಧ್ಯಕ್ಷ ಇಸುಫ್ ಮುಲ್ಲಾ, ಡಾ.ಗಿರೀಶ ಪಾಟೀಲ್, ಕೆಡಿಪಿ ಸದಸ್ಯ ಎನ್.ಎನ್.ಪಾಟೀಲ್, ರೇವಣಸಿದ್ಧ ಮಸಳಿ, ಎಂ.ಟಿ.ಸಿಂಗೆ, ಜಿ.ಕೆ.ನೆಲ್ಲಗಿ, ಬಿ.ಟಿ.ಬೋನಾಳ, ಡಾ.ಶ್ವೇತಾ ಕೋರಿ, ನಸೀಮಾ ಬೇಗಂ, ಮೈನುದ್ದಿನ್ ಮನಿಯಾರ, ಶರಣು ಮಳಗಿ, ಮಹಾದೇವ ನಾಟೀಕಾರ, ಎಸ್.ಎನ್.ಹಿಟ್ಟಿನ ಸೇರಿದಂತೆ ಜುವಾರಿ ಫರ್ಮ್ ಹಬ್ ಲಿಮಿಟೆಡ್ ಜೈಕಿಸಾನ್ ಜಂಕ್ಷನ್ ಅಧಿಕಾರಿಗಳು, ಆಸ್ಪತ್ರೆಯ ಸಿಬ್ಬಂದಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

# ಶಿವನ ಸ್ಮರಣೆಯಲ್ಲಿ ನೆಮ್ಮದಿಯ ತೋರಣ :ರೇಣುಕಾ ಅಕ್ಕ

**ಉದಯರಶ್ಮಿ ನ್ಯೂಸ್**

ಅರಿತವರಿಗೆ ಯಾವುದೇ ಭಯವಿಲ್ಲ

ಎಲ್ಲ ಹಬ್ಬ ಹರಿದಿನಗಳ ಹಿಂದೆ

ಸ್ಥಿರವಾಗಿರುವೆ, ಶಾಂತವಾಗಿರುವೆ,

ನಿಡಗುಂದಿ: ಶಿವನನ್ನು ಜಪತಪದೊಂದಿಗೆ ನಿರಂತರ ಆರಾಧಿಸಿ ಆ ಪರಮಾತ್ಮನ ಸ್ಮೃತಿಯಲ್ಲಿಯೇ ನಿತ್ಯ ನಮ್ಮ ಕರ್ಮ ಕಾಯಕಗಳನ್ನು ನಡೆಸಿಕೊಂಡು ಬಂದರೆ ಬದುಕು ಹಸನಾಗುವುದು ಎಂದು ನಿಡಗುಂದಿ ಪ್ರಜಾಪಿತ ಬ್ರಹ್ಮಾ ಕುಮಾರಿ ಈಶ್ವರಿ ವಿದ್ಯಾಲಯದ ಸಂಚಾಲಕಿ, ರಾಜಯೋಗಿನಿ ರೇಣುಕಾ ಅಕ್ಕನವರು ಹೇಳಿದರು.

ಪ್ರಜಾಪಿತ ಬ್ರಹ್ಮಾ ಕುಮಾರಿ ಈಶ್ವರಿ ವಿದ್ಯಾಲಯ ಸ್ಥಾಪನೆಗೊಂಡು 88 ವರ್ಷಗಳಾದ ಹಿನ್ನೆಲೆಯಲ್ಲಿ ನಿಡಗುಂದಿ ಪಟ್ಟಣದಲ್ಲಿ ನೂತನವಾಗಿ ನಿರ್ಮಾಣಗೊಳ್ಳುತ್ತಿರುವ ಪ್ರಜಾಪಿತ ಬ್ರಹ್ಮಾ ಕುಮಾರಿ ಈಶ್ವರಿ ವಿದ್ಯಾಲಯ ಆಶ್ರಮದ ವತಿಯಿಂದ ಪರಮ ಶ್ರೇಷ್ಠ ಶಿವ ಪರಮಾತ್ಮ ಜಯಂತಿ ಅಂಗವಾಗಿ ಹಮ್ಮಿಕೊಂಡಿದ್ದ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಶಿವ ಮಹಿಮೆ ಕುರಿತು ಮಾತನಾಡಿದ ಅವರು, ಪರಮಾತ್ಮ ಶಿವನ ಮಹಿಮೆ ಅರಿತವರಿಗೆ ಯಾವುದೇ ಭಯವಿಲ್ಲ ಎಂದರು.

ಶಿವ ಜ್ಞಾನದ ಸ್ಫೂರ್ತಿ, ಈ ಪರಮ ಪರಮಾತ್ಮನ ಸ್ಮೃತಿ ಸ್ತುತಿ ನಮ್ಮ ದೇಹದೊಳಗಿನ ಆತ್ಮಕ್ಕೆ ತಾಗಿದರೆ ನಮ್ಮೊಳಗಿನ ಅನೇಕ ವಿಕಾರ ರೂಪಿ ಮುಳ್ಳುಗಳು ಭಸ್ಮವಾಗುತ್ತವೆ. ಶಿವ ಭಗವಂತನ ವಚನಗಳ ಅನುಸಾರ ನಾವುಗಳು ಹೆಜ್ಜೆಯಿರಿಸಿದರೆ ನಮ್ಮೊಳಗಿನ ಆತ್ಮಜ್ಯೋತಿ ಜ್ಞಾನ ಬೆಳಗುತ್ತದೆ. ಶಿವಭಕ್ತಿ ಅರಿತ ಮನಸ್ಸುಗಳು ಪರರ ಆತ್ಮಜ್ಯೋತಿ ಮಿನುಗಿಸುವ ನಿಷ್ಕಾಮ ಸೇವೆಗೆ ಮುಂದಾಗುತ್ತವೆ ಎಂದರು.

ಎಲ್ಲ ಹಬ್ಬ ಹರಿದಿನಗಳ ಹಿಂದೆ ಆಧ್ಯಾತ್ಮಿಕ ಹಿನ್ನೆಲೆ, ರಹಸ್ಯಗಳಿವೆ. ಶ್ರದ್ಧಾ ಭಕ್ತಿಗಳಿಂದ ಹಬ್ಬ ಪರಂಪರೆ ಆಚರಿಸುತ್ತಿದ್ದಾಗ್ಯೂ ಅಸಂಖ್ಯಾತ ಮನಗಳು ಒಳಗೊಳಗೆ ದುಃಖಿ ಆಗಿವೆ. ಎಷ್ಟೇ ಪ್ರಗತಿ ಸಾಧಿಸಿದರೂ ಕೂಡಾ ಕತ್ತಲೆಯ ಅವಸ್ಥೆಯಲ್ಲಿ ಬದುಕುತ್ತಿದ್ದೆವೆ. ಜನರ ಭಾವಮನದ ಮೂಲೆಮೂಲೆಗಳಲ್ಲಿ ಇನ್ನೂ ಕತ್ತಲೆ ಎನ್ನುವ ಅಂಧಕಾರ ಉಳಿದುಕೊಂಡಿವೆ. ಕಾರಣ ಬಾಹ್ಯ ರೂಪದ ಹಬ್ಬಾಚರಣೆಗೆ ಹೆಚ್ಚು ಒತ್ತು ನೀಡುತ್ತಿದ್ದೆವೆ. ಅಂದ ಅಲಂಕಾರದ ವ್ಯಾಮೋಹ ನಮ್ಮಲ್ಲಿ ಹೆಚ್ಚಾಗಿದೆ. ಹಬ್ಬಗಳ ಪರಿಕಲ್ಪನೆ, ಮಹತ್ವ, ಅರ್ಥಗಳನ್ನು ಆಲಿಸದೇ ಇರುವ ಪರಿಣಾಮ ಮನದಲ್ಲಿ ಕತ್ತಲೆ, ಹೃದಯದಲ್ಲಿ ದುಃಖ,ಚಿಂತೆ ದಿನದಿಂದ ದಿನಕ್ಕೆ ಅಧಿಕವಾಗುತ್ತಲ್ಲಿದೆ. ಈ ಸೃಷ್ಟಿಯ ಮೇಲೆ ಅಧರ್ಮ,ಅನ್ಯಾಯ,ಪಾಪ ಕೃತ್ಯಗಳು ಹೆಚ್ಚಾಗಿವೆ. ಭಾಗಶಃ ಅಜ್ಞಾನ ಮೌಢ್ಯಗಳ ಪಾಪ ತುಂಬುತ್ತಿದೆ. ಯಾವ ಯುಗದಲ್ಲಿ ಅಧರ್ಮದ ತಾಂಡವ ಅತಿ ಅಗುತ್ತದೆಯೋ ಅಗ ಧರ್ಮಸ್ಥಾಪನೆಯ ಅವಶ್ಯಕತೆ ಬರುತ್ತದೆ. ಅಂಥ ಸಂಕೀರ್ಣ ಯುಗದಲ್ಲಿ ನಾ ಮತ್ತೆ ಬರುತ್ತೆನೆ ಎಂದು ಶಿವ ಪರಮಾತ್ಮ ಹೇಳಿ ಹೋಗಿದ್ದಾರೆ. ಇದು ಅದೇ ಸಮಯ ಅದೇ ಕಲಿಯುಗ ಅಗಿದೆ. ಸೃಷ್ಟಿ ಮೇಲೆ ಶಿವಪರಮಾತ್ಮ ಬರುವ ಘಳಿಗೆ ಈಗ ಎದುರಾಗಿದೆ ಎಂದರು.

ವೈಜ್ಞಾನಿಕವಾಗಿ ಎಷ್ಟೇ ಮುಂದುವರೆದರು,ಧನ ಸಂಪತ್ತಿನಲ್ಲಿ ತೇಲಾಡಿದರು ಮನುಷ್ಯನಲ್ಲಿ ಒಳಗೆ ಹೇಳಿಕೊಳ್ಳಲಾರದಂಥ ಕೊರಗಿನಿಂದ ಮರುಗುತ್ತಿದ್ದಾನೆ. ನಾವುಗಳು ಬಹುತೇಕ ಮಾನಸಿಕತೆ ಖಿನ್ನತೆಯಿಂದ ಕುಗ್ಗುತ್ತಲ್ಲಿದ್ದೇವೆ. ಆಂತರಿಕವಾಗಿ ಸ್ಥಿರವಾಗಿರುವೆ, ಶಾಂತವಾಗಿರುವೆ, ನೆಮ್ಮದಿಯಾಗಿರುವೆ ಎನ್ನುವರನ್ನು ಈ ಜಗತ್ತಿನಲ್ಲಿ ಎಲ್ಲಿ ಹುಡುಕಿದರೂ ಸಿಗದಂಥ ಸ್ಥಿತಿ ಇದೆ ಎಂದರು.

ಶಿವನಾಮದ ಧ್ಯಾನದಲ್ಲಿ ನಮ್ಮ ಆತ್ಮರಂಗ ಶುಚಿಗೊಳ್ಳಬೇಕು. ಅದು ಜಾಗರೂಕತೆಯಿಂದ ಇರುವಂತೆ ನೋಡಿಕೊಳ್ಳಬೇಕು.



ಶಿವ ಸ್ತುತಿಯಿದ್ದರೆ ಜಾಗೃತ ಬುದ್ಧಿ ಹಿಂಬಾಲಿಸುತ್ತದೆ. ಯಾವುದೇ ತಪ್ಪು ಕರ್ಮಗಳು ಆಗುವುದಿಲ್ಲ.ಈ ಜಗದಲ್ಲಿ ಹಲ ಮಹಾತ್ಮರು ಚಾರುತಿಗೊಂಡಿದ್ದಾರೆ. ಹೀಗಾಗಿ ಶಿವರಾತ್ರಿಯಲ್ಲಿ ಸ್ತುತಿಸಿ ಶಿವನಾಮದಿಂದ ಭಜಿಸಿ ಜಾಗರಣೆ ಮಾಡುವ ಸಂಪ್ರದಾಯಕ್ಕೆ ಮೌಲ್ಯ ಇದೆ. ಪ್ರಜಾಪಿತ ಬ್ರಹ್ಮ ಕುಮಾರಿ ಈಶ್ವರಿ ವಿಶ್ವ ವಿದ್ಯಾಲಯು ಸ್ಥಾಪನೆಯಾಗಿ 88 ವರ್ಷಗಳಾಗಿದೆ.ಆ ಪ್ರಯುಕ್ತ ಸೃಷ್ಟಿಕರ್ತನ 88ನೇ ಶಿವ ಜಯಂತಿ ಆಚರಿಸಲಾಗಿದೆ ಎಂದರು.


ಸಮಾರಂಭದ ಸಾನ್ನಿಧ್ಯ ವಹಿಸಿದ್ದ ಶ್ರೀ ರುದ್ರಮುನಿ ಶಿವಾಚಾರ್ಯ ಧ್ವಜಾರೋಹಣ ನೆರವೇರಿಸಿದರು. ಮುದ್ದೇಬಿಹಾಳ ಪ್ರಜಾಪಿತ ಬ್ರಹ್ಮಾ ಕುಮಾರಿ ಈಶ್ವರಿ ವಿಶ್ವವಿದ್ಯಾಲಯದ ಸಂಚಾಲಕಿ,ರಾ–ಜಯೋಗಿನಿ ಮಂಜುಳಾ ಅಕ್ಕವನರು ಅಧ್ಯಕ್ಷತೆ ವಹಿಸಿ ಹಿತೋಪದೇಶ ನೀಡಿದರು.

ಮುಖ್ಯ ಅತಿಥಿಗಳಾಗಿ ಪ್ರಗತಿಪರ ರೈತ ಮುಖಂಡ ಬಸವರಾಜ ಕುಂಬಾರ, ಸಮಾಜ ಸೇವಕ ಸಂಗಣ್ಣ ಕೊಳ್ಳೂರ, ಭೀಮನಗೌಡ ಪಾಟೀಲ, ಅಜ್ಜಪ್ಪ ಹಡಪದ, ಡಾ,ಸನ್ಮತಿಕುಮಾರ, ಎನ್.ಎಸ್. ರೇವಡಿ, ಬಸವರಾಜ ಗೌಡರ, ಅಶೋಕ ಉಳ್ಳಿ, ಲಕ್ಷ್ಮಣ ಬಿರಾದಾರ, ಜೀವನ ಕೆ.ಬಿ. ಗುಳೇದಗುಡ್ಡ, ಯೋಗಗುರು ಗಂಗಾಧರ ಹಿರೇಮಠ ಮೊದಲಾದವರು ಇದ್ದರು.

# “ಸಾಹಿತ್ಯ ಸಮ್ಮೇಳನ ಹೇಗಿರಬೇಕು” ಕೃತಿ ಬಿಡುಗಡೆ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ತಾಲೂಕಿನ ಹೂವಿನಹಿಪ್ಪರಗಿ ಗ್ರಾಮದ ಸಾಹಿತಿ ಭೀಮರಾಯ ಹೂಗಾರ ಅವರು ರಚಿಸಿರುವ ಸಾಹಿತ್ಯ ಸಮ್ಮೇಳನ ಹೇಗಿರಬೇಕು, ಲಕ್ಷ ನುಡಿಮುತ್ತುಗಳು ಎಂಬ ಪುಸ್ತಕಗಳು ಮಾ.23 ಮತ್ತು 24 ರಂದು ವಿಜಯಪುರದಲ್ಲಿ ನಡೆಯಲಿರುವ ಜಿಲ್ಲಾ 19 ನೇ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಲೋಕಾರ್ಪಣೆಯಾಗಲಿವೆ. ಕಳೆದ 25 ವರ್ಷಗಳಿಂದ ಸಾಹಿತ್ಯ ಕೃಷಿ ಮಾಡುತ್ತಿರುವ ಭೀಮರಾಯ ಹೂಗಾರ ಅವರು 40 ಪುಸ್ತಕಗಳನ್ನು ಪ್ರಕಟಿಸಿದ್ದಾರೆ. ಒಂದು ಲಕ್ಷ ನುಡಿಮುತ್ತುಗಳನ್ನು ಒಳಗೊಂಡ ಪುಸ್ತಕವನ್ನು ಸಾವಿರಾರು ಜನರಿಗೆ ಭೀಮರಾಯ ಹೂಗಾರ ಅವರು ಅಂಚೆಮೂಲಕ ಕಳುಹಿಸಿಕೊಟ್ಟಿದ್ದಾರೆ.




ಜಿಲ್ಲಾ 19 ನೇ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ನನ್ನ ಸಾಹಿತ್ಯ ಸಮ್ಮೇಳನ ಹೇಗಿರಬೇಕು ಎಂಬ ವಿನೂತನ ಪುಸ್ತಕ ಬಿಡುಗಡೆ ಮಾಡಲು ಕಸಾಪ ತಾಲೂಕಾಧ್ಯಕ್ಷ, ಜಿಲ್ಲಾ ಕಸಾಪ ಅಧ್ಯಕ್ಷರು ಅವಕಾಶ ನೀಡುತ್ತಿರುವುದು ಸಂತಸ ತಂದಿದೆ ಎಂದು ಸಾಹಿತಿ ಭೀಮರಾಯ ಹೂಗಾರ ಹೇಳಿದರು.

# ಮತದಾನ ಪ್ರಮಾಣ ಹೆಚ್ಚಿಸಲು ಕ್ರಮ ಕೈಗೊಳ್ಳಿ :ಸಿಇಒ ರಿಶಿ ಆನಂದ

**ಉದಯರಶ್ಮಿ ನ್ಯೂಸ್**

ವಿಜಯಪುರ: ಲೋಕಸಭೆ ಚುನಾವಣೆಗಾಗಿ ಜಿಲ್ಲೆಯಲ್ಲಿ ಮತದಾನದ ಶೇಕಡವಾರು ಪ್ರಮಾಣ ಹೆಚ್ಚಿಸಲು ಮತದಾನ ಜಾಗೃತಿಯ ವಿವಿಧ ಚಟುವಟಿ–ಕೆಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರೂ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕ ಅಧಿಕಾರಿ ರಿಶಿ ಆನಂದ ತಿಳಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಂದು ನಡೆದ ಜಿಲ್ಲಾ ಸ್ವೀಪ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮತದಾನವನ್ನು ಪಾರದರ್ಶಕವಾಗಿ ಹಾಗೂ ವ್ಯವಸ್ಥಿತವಾಗಿ ನಡೆಸುವಂತೆ ಮತ್ತು ಮತದಾನದ ಪ್ರಾಮುಖ್ಯತೆಯನ್ನು ಅರಿಯುವಂತೆ ಮಾಡಲು ಸ್ವೀಪ್ ಸಮಿತಿ ಕಾರ್ಯನ್ಮೋಖವಾಗಬೇಕು. ಕಡಿಮೆ ಮತದಾನ ಆಗಿರುವ ಬೂತ್‌ಗಳನ್ನು ಗುರುತಿಸಿ ಮತದಾನ ಪ್ರಮಾಣ ಹೆಚ್ಚಳ ಮಾಡುವಂತೆ ಎಲ್ಲಾ ಇಲಾಖೆಯ ಅಧಿಕಾರಿಗಳು ಆಧ್ಯತೆ ನೀಡಿ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ದುಡಿಯಲು ಬೇರೆ ಜಿಲ್ಲೆ, ರಾಜ್ಯಕ್ಕೆ ವಲಸೆ ಹೋಗಿರುವವರನ್ನು ಗುರುತಿಸಿ ಅವರು ಕೂಡಾ ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಲು ಪ್ರೇರೇಪಿಸಬೇಕು ಎಂದರು.

ಆಸ್ಪತ್ರೆ, ಬಸ್ ನಿಲ್ದಾಣ, ಶಾಲಾ–ಕಾಲೇಜು ಸಾರ್ವಜನಿಕ ಸ್ಥಳಗಳಲ್ಲಿ ಮತದಾನದ ಮಹತ್ವ ಸಾರುವ ಭಿತ್ತಿಪತ್ರ ಪ್ರದರ್ಶಿಸಬೇಕು. ಮತದಾನದ ಪ್ರಮಾಣ ಗಣನೀಯವಾಗಿ ಹೆಚ್ಚಿಸಲು ಸಾರ್ವಜನಿಕರಿಗೆ ಮತದಾನದ ಮಹತ್ವ ತಿಳಿಸಲು ರಂಗೋಲಿ ಸ್ಪರ್ಧೆ, ಸೈಕಲ್ ಜಾಥಾ, ಪ್ರಬಂಧ ಸ್ಪರ್ದೆ, ಚಿತ್ರಕಲೆ ಸ್ಪರ್ಧೆ, ಶಾಲಾ ಮಕ್ಕಳಿಂದ ಜಾಗೃತಿ ಜಾಥಾ, ಹಾಸ್ಟೇಲ್, ಸಾಕ್ಷ [illegible]ಚಿತ್ರ ಪ್ರದರ್ಶನ, ಶಾಲಾ ಮಕ್ಕಳಿಂದ ನಾಟಕ ಪ್ರದರ್ಶನ, ಸ್ವ ಸಹಾಯ ಸಂಘಗಳ ವತಿಯಿಂದ ಮತದಾನ ಜಾಗೃತಿ ಕಾರ್ಯಕ್ರಮ, ವಿವಿ ಪ್ಯಾಟ್‌ಗಳ ಬಗ್ಗೆ ತಿಳುವಳಿಕೆ ಮೂಡಿಸುವಿಕೆಯಂತ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ತಿಳಿಸಿದರು.



ವಯಸ್ಸಾದ ಹಿರಿಯ ನಾಗ–ರೀಕರಿಗೆ ಹಾಗೂ ವಿಕಲಚೇತನರಿಗೆ ಮತಗಟ್ಟೆಗೆ ತೆರಳಿ ಮತ ಹಾಕಲು ವೀಲ್‌ಚೇರ್ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ಯಾವುದೇ ಕಾರಣಕ್ಕೂ ಮತದರಾರು ಮತದಾನ ಪ್ರಕ್ರಿಯೆಯಿಂದ ವಂಚಿತರಾಗದಂತೆ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಹೇಳಿದರು.

ಇದೇ ವೇಳೆ ಮತದಾನ ಜಾಗೃತಿ ಪ್ರತಿಜ್ಞಾವಿಧಿ ಬೋಧಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಪಂಚಾಯತಿಯ ಉಪ ಕಾರ್ಯದರ್ಶಿ ಬಿ.ಎಸ್. ಮೂಗನೂರಮಠ, ಯೋಜನಾ ನಿರ್ದೇಶಕರಾದ ಸಿ. ಆರ್, ಮುಂಡರಗಿ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಮತದಾರರು ಜಾಗೃತರಾಗಿ ತಮ್ಮ ಹಕ್ಕುಗಳನ್ನು ಪಡೆಯಬೇಕು

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಕರ್ನಾಟಕ ದಲ್ಲಿಯೇ ಅತೀ ಹಿಂದುಳಿದ ತಾಲೂಕುಗಳಲ್ಲಿ ಮುದ್ದೇಬಿಹಾಳ ಕೂಡ ಒಂದು ಎಂದು ಕರೆಸಿಕೊಳ್ಳುತ್ತಿದೆ. ಆಲಮಟ್ಟಿ ನಾರಾಯಣಪುರ ಅಣೆಕಟ್ಟು ಇದ್ದರೂ ನೀರಾವರಿ ಸಂಪೂರ್ಣ ಆಗಿಲ್ಲ, ಉದ್ಯಮಗಳು ಸ್ಥಾಪನೆಯಾಗಿಲ್ಲ. ಕಾರಣ ಚುನಾವಣೆಗಳಲ್ಲಿ ಮತದಾರರು ಜಾಗೃತಿಯಾಗುವ ಮೂಲಕ ತಮ್ಮ ಹಕ್ಕುಗಳನ್ನು ಪಡೆಯಬೇಕು ಎಂದು ನ್ಯಾಯವಾದಿ ಎನ್.ಬಿ.ಮುದ್ನಾಳ ಹೇಳಿದರು.

ಪಟ್ಟಣದ ಫಕೀರೇಶ್ವರ ಡೈಗ್ನೋಸ್ಟಿಕ್ ಸೆಂಟರ್ ನಲ್ಲಿ ವಿವಿಧ ಸಂಘಟನೆಗಳ ಅಡಿ ನೂತನ ತಾಲೂಕು ಮತದಾರ ಜಾಗೃತಿ ವೇದಿಕೆಯ ನಿರ್ಮಾಣ ಕುರಿತು ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ಸಂವಿಧಾನದ ಅನುಚ್ಛೇದ 371ಜೆ ಅಡಿಯಲ್ಲಿ ವಿಜಯಪುರ ಜಿಲ್ಲೆಯ ಅಭಿವೃದ್ಧಿಯನ್ನು ಮಾಡುವುದು, ಆಲಮಟ್ಟಿ ಯಾದಗಿರಿ ರೈಲು ಮಾರ್ಗ ನಿರ್ಮಾಣ, ಜಿಲ್ಲೆಯಿಂದ 80 ಕಿ.ಮೀ ದೂರವಿರುವ ತಾಲೂಕು ಕೇಂದ್ರವನ್ನು ಜಿಲ್ಲಾ ಕೇಂದ್ರವನ್ನಾಗಿಸುವುದು ಸೇರಿದಂತೆ ಕೇಂದ್ರ ಸರ್ಕಾರದ ವಿವಿಧ ಯೋಜನೆಗಳ ಲಾಭವನ್ನು ಪಡೆದುಕೊಳ್ಳುವಂತಾಗಲು ಬರುವ ಲೋಕಸಭೆಯ ಸ್ಪರ್ಧಾಳುಗಳಿಗೆ ನಮ್ಮ ಬೇಡಿಕೆಗಳನ್ನು ಮುಂದಿಟ್ಟು ಯೋಜಿತವಾಗಿ ಕೆಲಸ ಮಾಡಲು ಸಾಧ್ಯವಾಗುವಂತೆ ಮತದಾರರನ್ನು ಜಾಗೃತಿಗೊಳಿಸುವ ಉದ್ದೇಶದಿಂದ ಹೋರಾಟ ವೇದಿಕೆಯನ್ನು ರಚಿಸಲಾಗುತ್ತಿದೆ ಎಂದರು.



ಸಭೆಯಲ್ಲಿ ವಿರುಪಾಕ್ಷಿ ಪತ್ತಾರ, ಮುಸ್ತಾಕ ಬಾಗವಾನ, ಶಂಕರಗೌಡ ರಾಯಗೊಂಡ ಎಲ್.ಎಸ್.ಮೇಟಿ ವಕೀಲರು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು.


ಇದೇ ವೇಳೆ ಶಿವಾಜಿ ಬಿಜಾಪುರ್ ಅವರನ್ನು ಸಂಘಟನೆಯ ಸಂಚಾಲಕರನ್ನಾಗಿ ಆಯ್ಕೆ ಮಾಡಲಾಯಿತು. ಡಾ. ಚಂದ್ರಶೇಖರ್ ಶಿವಯೋಗಿಮಠ, ಲೋಹಿತ್ ನಾಲತವಾಡ, ರವೀಂದ್ರ ನಂದೆಪ್ಪನವರ, ಬಡ್ಡಾ ಕುಂಟೋಜಿ, ಸಂಗಣ್ಣ ಮೇಲಿನಮನಿ, ಮಹೇಶ ಕೆಂದೂಳಿ, ಮಹೇಶ ಹೂಗಾರ, ಚಂದ್ರು ಪ್ಯಾಟಿಗೌಡರ, ಆನಂದ ಜಂಬಗಿ, ಪುಟ್ಟು ಪಾಟೀಲ, ಅಶೋಕ್ ಕುಲಕರ್ಣಿ, ಮುತ್ತು ಪತ್ತಾರ ಸೇ–ರಿದಂತೆ ಮತ್ತೀತರರು ಇದ್ದರು.

# ಲೋಕಅದಾಲತ್ :1345 ಪ್ರಕರಣಗಳು ಇತ್ಯರ್ಥ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪಟ್ಟಣದ ನ್ಯಾಯಾಲಯ ಸಂಕೀರ್ಣದಲ್ಲಿರುವ ನಾಲ್ಕು ನ್ಯಾಯಾಲಯಗಳಲ್ಲಿ ವಿವಿಧ ನ್ಯಾಯಾಧೀಶರ ಸಮ್ಮುಖದಲ್ಲಿ ಶನಿವಾರ ಜರುಗಿದ ರಾಷ್ಟ್ರೀಯ ಲೋಕಅದಲಾತ್ನಲ್ಲಿ 2,680 ಪ್ರಕರಣಗಳಲ್ಲಿ 1,345 ಪ್ರಕರಣಗಳು ಇತ್ಯರ್ಥವಾದವು.

ರಾಷ್ಟ್ರೀಯ ಲೋಕ ಅದಾಲತ್ನಲ್ಲಿ ಅಪರಾಧ ಪ್ರಕರಣಗಳು, ಚೆಕ್ ಬೌನ್ಸ್, ವಾಟ್ನಿ ದಾವೆ, ಬ್ಯಾಂಕ್ ಪ್ರಕರಣಗಳು ಸೇರಿದಂತೆ ವಿವಿಧ ಪ್ರಕರಣಗಳನ್ನು ಹಿರಿಯ ಸಿವ್ಹಿಲ್ ನ್ಯಾಯಾಧೀಶ ಪ್ರಕಾಶ ಅರ್ಜುನ ಬನಸೋಡೆ, ಹೆಚ್ಚುವರಿ ಹಿರಿಯ ಸಿವ್ಹಿಲ್ ನ್ಯಾಯಾಧೀಶೆ ತಯ್ಯಾಬಾ ಸುಲ್ತಾನ, ಸಿವ್ಹಿಲ್ ನ್ಯಾಯಾಧೀಶೆ ತೇಜಶ್ವಿನಿ ಸೊಗಲದ, ಹೆಚ್ಚುವರಿ ಸಿವ್ಹಿಲ್ ನ್ಯಾಯಾಧೀಶೆ ಸೌಮ್ಯ ಹೂಲಿ ಅವರು ಕೈಗೆತ್ತಿಗೊಂಡು ರಾಜೀ ಸಂಧಾನ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿದರು.



ರಾಷ್ಟ್ರೀಯ ಲೋಕ ಅದಾಲತ್ನಲ್ಲಿ ವಕೀಲರ ಸಂಘದ ಅಧ್ಯಕ್ಷ ಎಚ್.ಎಸ್. ಗುರಡ್ಡಿ, ವಕೀಲರಾದ ಬಿ.ಕೆ.ಕಲ್ಲೂರ, ವ್ಹಿ.ಜಿ.ಕುಲಕರ್ಣಿ, ವ್ಹಿ.ಬಿ.ಮರ್ತುರ, ಗೋಪಾಲ ಚಿಂಚೋಳಿ, ಎಂ. ಎಸ್.ಗೊಳಸಂಗಿ, ಬಿ.ಪಿ.ಪತ್ತಾರ, ಜಿ.ಜಿ.ಬಿಸನಾಳ, ರಾಜು ಅಡ್ಡೋಡಗಿ ಸೇರಿದಂತೆ ವಿವಿಧ ವಕೀಲರು ಭಾಗವಹಿಸಿದ್ದರು.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR